ಸಂಪುಟ : 8 ಸಂಚಿಕೆ : 250 ಪುಟ : 4 ಬೆಲೆ : 3.00 ಶನಿವಾರ ನವ್ಹಂಬರ್ 11, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 8 Issue : 250 Pages : 4 Price : 3.00 Saturday November 11, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ಮಾಹಿತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 11 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.



**ಸ್ಥಳಗಳ ವಿವರ:** ವಾರ್ಡ್ ನಂ. 5, 6 ಸಿದ್ದಲಿಂಗ ನಗರ, ರೊಟ್ಟಿಯವರ ಲೈನ್, ನ್ಯಾವಳ್ಳಿಯವರ ಲೈನ್, ಮಂಜುರವರ ಲೈನ್ ರೆಡ್ಡಿಯವರ ಲೈನ್, ಪಿ ಪಿ ಗುಡಿ ಹಿಂದಿನ ಭಾಗ, ಭಜಂತ್ರಿ ಓಣಿ, ಅಂಬೇಡ್ಕರ್ ನಗರ, ಹೂಲಿಯವರ ಲೈನ್, ಜನತಾ ಪ್ಲಾಟ್, ಹನುಮಂತ ದೇವರ ಗುಡಿ ಲೈನ್, ಸ್ವಾಮಿಯವರ ಲೈನ್, ಪಾಟೀಲರ ಲೈನ್, ಕೊಟಗಿ ಮಾಸ್ತರ್ ಲೈನ್,


ವಾರ್ಡ್ ನಂ. 22 ತಾಜ್ ನಗರ, ಅಮರೇಶ್ವರ ನಗರ, ಬನ್ನಿ ಮಹಾಕಾಳಿ ಗುಡಿ ಲೈನ್, ಹೊಸಗುಡಿ ಲೈನ್, ಶುದ್ಧ ನೀರಿನ ಘಟಕದ ಲೈನ್, ಗ್ವಾರಿಯವರ ಲೈನ್, ಮೀನುಗಾರಿಕೆ ಆಫೀಸ್ ಲೈನ, ಹಿದಾಯತ್ ಶಾಲೆಯ ಲೈನ್, ವಾರ್ಡ್ ನಂ 16, 21 ಸುಣ್ಣದ ಭಟ್ಟಿ ಭಾಗ-1,2 ಕುಷ್ಟರೋಗ ಕಾಲೋನಿ ಭಾಗ -1,2 ಅಂಬೇಡ್ಕರ್ ನಗರ ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 30, 34, 35 ವಡ್ಡರಗೇರಿ, ಮೂರು ಶಿಳ್ಳಿನ ವಕಾರ, 46 ಪ್ಲಾಟ್, ಕುಂಚಿಕೊರವರ ಓಣಿ, ಚನ್ನಮ್ಮ ಸರ್ಕಲ್, ಡಿಪೋ ಹಿಂದಿನ ಭಾಗ, ಶಿವಾನಂದ ಗಾರ್ಡನ್, ವಾರ್ಡ್ ನಂ. 12,13 ಕಾರ್ಕಳ ಅವರ ಲೈನ್, ತೋಪೆಯವರ ಲೈನ್, ಉಪ್ಪಿನವರ ಲೈನ್, ಜೋಪಡಿ ಲೈನ್, ಶಿವನಗುತ್ತಿಯವರ ಲೈನ್, ಜಾಧವ್‌ರ ಲೈನ್, ಡಾಕ್ಟರ್ ಲೈನ್, ಅಗಸರ ಲೈನ್, ಇಟಗಿಯವರ ಲೈನ್, ಗಣಪತಿ ಗುಡಿ ಹಿಂದಿನ ಭಾಗ, ವಿನಾಯಕ ರೋಡ್ 1 ನೇ ಕ್ರಾಸ್, ವಾರ್ಡ್ ನಂ. 29 ಡಂಬಳದವರ ಲೈನ್, ಭಾಂಡಗೆ ಲೈನ್, ವಾರ್ಡ್ ನಂ. 5 ನೇಕಾರ ಕಾಲೋನಿ, ಮೆಂಬರ್ ಲೈನ್, ಕಿಲ್ಲಾಡದವರ ಲೈನ್, ಹೊನ್ನಾಳಿಯವರ ಲೈನ್, ದೇವಮ್ಮರ ಲೈನ್. ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರ ಇಂದಿನ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರು ನವೆಂಬರ್ 11 ರಂದು ಸಂಜೆ 7 ಗಂಟೆಗೆ ಬಳ್ಳಾರಿಯಿಂದ ರಸ್ತೆ ಮೂಲಕ ಗದಗಿಗೆ ಆಗಮಿಸಿ ವಾಸ್ತವ್ಯ ಮಾಡುವರು ಎಂದು ಸಚಿವರ ಆಪ್ತ ಕಾರ್ಯದರ್ಶಿಗಳ ಪ್ರಕಟಣೆ ತಿಳಿಸಿದೆ.



## ಜಮೀನು ಮಾಲೀಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಜಮೀನಿನ ಮಾಲೀಕರಿಗೆ ಈ ಮೂಲಕ ವಿನಂತಿಸುವುದೇನೆಂದರೆ, ಗದಗ-ಬೆಟಗೇರಿ ನಗರಸಭೆಯ ವಸತಿರಹಿತ ಪೌರಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸಲು ನಗರಸಭೆ ನಿರ್ಧರಿಸಿದೆ.


ಈ ಸಂಬಂಧ ಸುಮಾರು 8 ಎಕರೆ ಜಮೀನಿನ ಅವಶ್ಯಕತೆಯಿದ್ದು, ಜಮೀನು ಮಾರಾಟ ಮಾಡುವ ಮಾಲೀಕರು ನಗರಸಭೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಗರಸಭೆಯ ತಾಂತ್ರಿಕ ಶಾಖೆಯಲ್ಲಿ ಗದಗ-ಬೆಟಗೇರಿ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ಜಗದ್ಗುರು-ಕನ್ನಡ ಕರ್ನಾಟಕ ಸಂಭ್ರಮ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯ(ಶ್ರೀ ತೋಂಟದಾರ್ಯ ಮಠದ ಆವರಣ)ದಲ್ಲಿ ಶನಿವಾರ ಸಂಜೆ 5 ಗಂಟೆಗೆ ಕನ್ನಡ ಜಗದ್ಗುರು ಡಾ. ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಸೇವೆ ಹಾಗೂ ಕನ್ನಡ ರಾಜ್ಯೋತ್ಸವ-ಕರ್ನಾಟಕ ಸುವರ್ಣ ಮಹೋತ್ಸವ ಸಂಭ್ರಮ ಕುರಿತು ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಶರಣ ಚನ್ನಬಸಪ್ಪ ಕಂಠಿ ವಹಿಸುವರು. ಡಾ. ಎಂ.ಎಂ. ಕಲಬುರ್ಗಿ ಅಧ್ಯಯನ ಸಂಸ್ಥೆಯ ಕಾರ್ಯದರ್ಶಿ ಶರಣ ಶಿವನಗೌಡ ಬಿ.ಗೌಡರ ಇವರು ಕನ್ನಡ ಜಗದ್ಗುರುಗಳ ಕುರಿತು ಮಾತನಾಡುವರು. ಸಹಾಯಕ ಕನ್ನಡ ಪ್ರಾಧ್ಯಾಪಕರಾದ ಡಾ. ನಾಗಪ್ಪ ಸುರಳಿಕೇರಿ



68ನೇ ಕನ್ನಡ ರಾಜ್ಯೋತ್ಸವ-ಕರ್ನಾಟಕ ಸಂಭ್ರಮ-50 ಕುರಿತು ಮಾತನಾಡುವರು. ಜಾಗತಿಕ ಲಿಂಗಾಯತ ಮಹಾಸಭೆಯ ಜಿಲ್ಲಾಧ್ಯಕ್ಷ ಶರಣ ಕೆ.ಎಸ್. ಚೆಟ್ಟಿ, ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ಶರಣೆ ಸುಧಾ ಹುಚ್ಚಣ್ಣವರ ಇವರುಗಳು ಆಗಮಿಸುವರು.

ಶರಣ ಸಾಹಿತ್ಯ ಪರಿಷತ್ತಿನ ಸದಸ್ಯರು, ಕನ್ನಡಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಡಾ. ಆರ್.ಎಸ್. ದಾನರಡ್ಡಿ ಮತ್ತು ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಮಾಜಿ ಸಚಿವ, ಜೆಡಿಎಸ್ ಮುಖಂಡ ಅಲ್ಕೋಡ ಹನುಮಂತಪ್ಪ ಆರೋಪ

# ಬರ ನಿರ್ವಹಣೆಯಲ್ಲಿ ಕಾಂಗ್ರೆಸ್ ಸಂಪೂರ್ಣ ವಿಫಲ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಹಿಂಗಾರು-ಮುಂಗಾರು ಮಳೆ ಕೈಕೊಟ್ಟು ರೈತರಷ್ಟೇ ಅಲ್ಲದೆ ಜಾನುವಾರುಗಳೂ ತೊಂದರೆ ಎದುರಿಸುವಂತಾಗಿದೆ. ಮಳೆಗಾಗಿ ಎಸ್.ಎಂ. ಕೃಷ್ಣ ಸರಕಾರದ ಅವಧಿಯಲ್ಲಿ ಮೋಡ ಬಿತ್ತನೆ ಮಾಡಲಾಗಿತ್ತು. ಆದರೆ ಯಾವುದೇ ಪ್ರಯೋಜನ ಆಗಿರಲಿಲ್ಲ. ಈ ಹಿಂದೆ ಸಿದ್ದರಾಮಯ್ಯ ಸರಕಾರದಲ್ಲೂ ಮೋಡ ಬಿತ್ತನೆ ಮಾಡಲಾಗಿತ್ತು. ಆಗಲೂ ಕೂಡ ನಿರೀಕ್ಷಿತ ಫಲ ಸಿಕ್ಕಿಲ್ಲ. ಹೀಗಾಗಿ ರೈತರು ಮತ್ತಷ್ಟು ಸಂಕಷ್ಟ ಎದುರಿಸಬೇಕಾಗಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೆಲ್ಲಾ ರಾಜ್ಯದಲ್ಲಿ ಬರ ಆವರಿಸುತ್ತದೆ ಎಂದು ಮಾಜಿ ಸಚಿವ, ಜೆಡಿಎಸ್ ಮುಖಂಡ ಅಲ್ಕೋಡ ಹನುಮಂತಪ್ಪ ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಬಂಗಾರಪ್ಪ, ಎಸ್.ಎಂ. ಕೃಷ್ಣ ಅಷ್ಟೇ ಅಲ್ಲದೆ, ಸಿದ್ದರಾಮಯ್ಯ ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿಯೂ ರಾಜ್ಯದಲ್ಲಿ ಬರಗಾಲ ಆವರಿಸಿತ್ತು. ಅಂತೆಯೇ ಈ ಬಾರಿಯೂ ರಾಜ್ಯದಲ್ಲಿ ಭೀಕರ ಬರ ಬಂದಿದೆ. ಕುಡಿಯುವ ನೀರಿಗೂ ಸಮಸ್ಯೆ ಎದುರಾಗಿದೆ. ಬರ ಪರಿಹಾರ ಕಾಮಗಾರಿ ಕೈಗೊಳ್ಳುವಲ್ಲಿ ಕಾಂಗ್ರೆಸ್ ಸರಕಾರ ಸಂಪೂರ್ಣ ವಿಫಲವಾಗಿದೆ. ಈ ಹಿನ್ನೆಲೆಯಲ್ಲಿ ಜೆಡಿಎಸ್ ಹಳ್ಳಿಗಳಿಗೆ ಭೇಟಿ ನೀಡಿ ಜನರ ಕಷ್ಟ ಆಲಿಸುವ ಕೆಲಸ ಮಾಡಲಿದೆ ಎಂದರು.




> ಟಿಪ್ಪು ಜಯಂತಿ ಆಚರಣೆಯನ್ನು ಆರಂಭಿಸಿದ್ದು ಕಾಂಗ್ರೆಸ್ ಪಕ್ಷ. ಆದರೆ, ಬಿಜೆಪಿ ಅದನ್ನು ವಿರೋಧಿಸಿತು. ಪ್ರಸ್ತುತ, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದೆ. ಈಗಲೂ ಟಿಪ್ಪು ಜಯಂತಿ ಆಚರಿಸುತ್ತಿದೆ. ಈ ವಿಚಾರದ ಬಗ್ಗೆ ಜೆಡಿಎಸ್ ನಿಲುವು ಏನು ಎಂಬುದು ಹಾಗಿರಲಿ, ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮೊದಲ ಸಚಿವ ಸಂಪುಟದಲ್ಲಿಯೇ ಅಲ್ಪಸಂಖ್ಯಾತರಿಗೆ ಶೇ 4ರಷ್ಟು ಮೀಸಲಾತಿಯನ್ನು ಘೋಷಣೆ ಮಾಡಲಾಗುವುದು ಎಂಬ ಭರವಸೆ ನೀಡಿತ್ತು. ಆ ಭರವಸೆಯ ವಿಚಾರ ಏನಾಯಿತು ಎಂಬುದನ್ನು ಸರಕಾರ ಸ್ಪಷ್ಟಪಡಿಸಬೇಕು.
>
> **– ಅಲ್ಕೋಡ ಹನುಮಂತಪ್ಪ,**
> ಮಾಜಿ ಸಚಿವ, ಜೆಡಿಎಸ್ ಮುಖಂಡ.

ಜೆಡಿಎಸ್ ಪಕ್ಷದ ವರಿಷ್ಠರು ಬರಪೀಡಿತ ಹಳ್ಳಿಗಳಿಗೆ ತೆರಳಿ ಅಧ್ಯಯನ ನಡೆಸುವ ತೀರ್ಮಾನ ಕೈಗೊಂಡಿದ್ದಾರೆ. ಈ ಸಂಬಂಧ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ವಿಧಾನಸಭೆಯ ಪರಾಜಿತ ಅಭ್ಯರ್ಥಿಗಳನ್ನು ಒಳಗೊಂಡ ಕಮಿಟಿ ರಚಿಸಿ, ಗ್ರಾಮಗಳಿಗೆ ಭೇಟಿ ನೀಡಿ ಬರದ ನೈಜ ವರದಿಯನ್ನು ಪಕ್ಷದ ರಾಜ್ಯಾಧ್ಯಕ್ಷ ಕುಮಾರಸ್ವಾಮಿ ಅವರಿಗೆ ನೀಡಲು ತೀರ್ಮಾನ ಕೈಗೊಳ್ಳಲಾಗಿದೆ ಎಂದರು.

ಜೆಡಿಎಸ್ ಮುಖಂಡರು, ಕಾರ್ಯಕರ್ತರು ಹಳ್ಳಿಗಳಿಗೆ ಭೇಟಿ ನೀಡಿ ರೈತರ ಮತ್ತು ಬರ ಅಧ್ಯಯನ ನಡೆಸಲು ಅನುಕೂಲ ಆಗುವಂತೆ ರಾಜ್ಯಾಧ್ಯಕ್ಷರು ಹಂಗಾಮಿ ಜಿಲ್ಲಾಧ್ಯಕ್ಷರು, ಕಾರ್ಯಾಧ್ಯಕ್ಷರನ್ನು ಗುರುತಿಸಿ ನೇಮಕ ಮಾಡಿದ್ದಾರೆ. ಪ್ರಸ್ತುತ ಗದಗ ಜಿಲ್ಲೆಯ ಜೆಡಿಎಸ್ ಹಂಗಾಮಿ ಅಧ್ಯಕ್ಷರಾಗಿ ಮಕ್ತುಂಸಾಬ ಮುಧೋಳ ಹಾಗೂ ಕಾರ್ಯಾಧ್ಯಕ್ಷರಾಗಿ ಸಿ.ಎಸ್ ಪಾಟೀಲ ಅವರನ್ನು ನೇಮಿಸಲಾಗಿದೆ. ಶೀಘ್ರದಲ್ಲಿಯೇ ಕೋರ್ ಕಮಿಟಿ ಗದಗ ಜಿಲ್ಲೆಗೆ ಭೇಟಿ ನೀಡಲಿದ್ದು, ಪೂರ್ಣಾವಧಿಯ ಅಧ್ಯಕ್ಷ, ಕಾರ್ಯಾಧ್ಯಕ್ಷರನ್ನು ನೇಮಕ ಮಾಡಲಿದೆ ಎಂದು ಮಾಹಿತಿ ನೀಡಿದರು.

# ಆಯುರ್ವೇದದಿಂದ ಆರೋಗ್ಯ ಕಾಪಾಡಲು ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಆರೋಗ್ಯ ಸೂತ್ರಗಳನ್ನು ಅಳವಡಿಸಿಕೊಂಡು ಉತ್ತಮ ಆರೋಗ್ಯ ಹೊಂದಬೇಕು. ರೋಗದಿಂದ ಮುಕ್ತಿ ಪಡೆದು ಆರೋಗ್ಯ ಕಾಪಾಡಲು ಆಯುರ್ವೇದವು ಮುಖ್ಯ ಮಾರ್ಗವಾಗಿದೆ ಎಂದು ಗದಗ ಬೆಟಗೇರಿ ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಶುಕ್ರವಾರದಂದು ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆಯಿಂದ ಪ್ರತಿದಿನ ಪ್ರತಿಯೊಬ್ಬರಿಗೆ ಸಮಗ್ರ ಆರೋಗ್ಯಕ್ಕಾಗಿ ಅಯುರ್ವೇದ ಎಂಬ ಘೋಷವಾಕ್ಯದೊಂದಿಗೆ ಹಮ್ಮಿಕೊಳ್ಳಲಾದ "ಶ್ರೀ ಧನ್ವಂತರಿ ಜಯಂತಿ" 8ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಶ್ರೀ ಧನ್ವಂತ್ರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಅವರು ಮಾತನಾಡಿದರು.



ಆಯುರ್ವೇದ ಶಾಸ್ತ್ರವು ಎಲ್ಲ ವೈದ್ಯಕೀಯ ಶಾಸ್ತ್ರದ ಮೂಲವಾಗಿದೆ. ಪ್ರಾಚೀನ ಭಾರತೀಯ ಸಂಸ್ಕೃತಿಯನ್ನು ಮೆಲುಕು ಹಾಕುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದ್ದು ಪ್ರತಿಯೊಬ್ಬರೂ ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಆಯುರ್ವೇದ ಚಿಕಿತ್ಸೆಯ ಕುರಿತು ತಿಳುವಳಿಕೆ ಹೊಂದಬೇಕು ಎಂದು ನುಡಿದರು.

ಜಿಲ್ಲಾ ಆಯುಷ್ ಇಲಾಖೆ ಅಧಿಕಾರಿ ಡಾ. ಮಲ್ಲಿಕಾರ್ಜುನ್ ಎಸ್ ಉಪ್ಪಿನ ಮಾತನಾಡಿ, ನಾವೀಗ 8ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ. ಭಾರತೀಯ ವೈದ್ಯಕೀಯ ಪದ್ಧತಿಯಾದ ಆಯುರ್ವೇದ ಶಾಸ್ತ್ರ ಬೆಳವಣಿಗೆಯ ಕುರಿತು ಗಮನದಲ್ಲಿಟ್ಟು ಅವಲೋಕನ ಮಾಡಬೇಕಾಗಿದೆ. ನಮ್ಮ ಭಾರತೀಯ ಸಂಸ್ಕೃತಿಯಲ್ಲಿನ ಪ್ರಾಚೀನರು ಬಿಟ್ಟು ಹೋದ ಆಯುರ್ವೇದದ ವಿಷಯಗಳನ್ನು ಪ್ರಪಂಚಕ್ಕೆ ತಿಳಿಸಬೇಕಾಗಿದೆ. ಪ್ರತಿಯೊಬ್ಬರೂ ಸೂಕ್ತ ಸಮಯದಲ್ಲಿ ರೋಗ ನಿವಾರಣೆಗೆ ಆಯುರ್ವೇದ ಚಿಕಿತ್ಸೆಯನ್ನು ಪಡೆದು ಯಾವುದೇ ದುಷ್ಪರಿಣಾಮವಿಲ್ಲದೇ ಆರೋಗ್ಯಕರ ಜೀವನ ನಡೆಸಬಹುದಾಗಿದೆ ಎಂದು ವಿವರಿಸಿದರು.

ಇದೇ ಸಂದರ್ಭದಲ್ಲಿ ಆಯುಷ್ ಇಲಾಖೆಯಿಂದ ಪ್ರಕಟಿಸಲಾದ ಕರಪತ್ರ ಬಿಡುಗಡೆಗೊಳಿಸಲಾಯಿತು.

ಡಾ.ಅಶೋಕ ಮತ್ತಿಗಟ್ಟಿ ವಿರಚಿತ ಆಯುರ್ವೇದಿಕ್ ಗೀತೆಯನ್ನು ನಗರದ ಡಿ.ಜಿ.ಎಂ. ಕಾಲೇಜಿನ ವಿದ್ಯಾರ್ಥಿನಿಯರು ಪ್ರಸ್ತುತಪಡಿಸಿದರು. ಡಾ.ಹರ್ಷವರ್ಧನ್ ಅವರು ವಿದ್ಯಾರ್ಥಿಗಳಿಗಾಗಿ ಆಯುರ್ವೇದ ಕುರಿತು ಹಾಗೂ ಡಾ. ಲಿಂಗರಾಜ ನಿಡುವಣಿ ಅವರು ರೈತರಿಗಾಗಿ ಆಯುರ್ವೇದ ಕುರಿತು ಉಪನ್ಯಾಸ ನೀಡಿದರು.

ಡಾ.ಪಿ.ಬಿ.ಹಿರೇಗೌಡ್ರ ಅವರು ಸಾರ್ವಜನಿಕರ ಆರೋಗ್ಯಕ್ಕಾಗಿ ಆಯುರ್ವೇದ ಕುರಿತು ಉಪನ್ಯಾಸ ನೀಡಿದರು. ಸಮಾರಂಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಆಯುಷ್ ವೈದ್ಯಾಧಿಕಾರಿಗಳು, ರೋಣದ ರಾಜೀವಗಾಂಧಿ ಆಯುರ್ವೇದ ಮಹಾವಿದ್ಯಾಲಯದ ವಿದ್ಯಾರ್ಥಿಗಳು, ಗಾಲಾ ನರ್ಸಿಂಗ್ ವಿದ್ಯಾಥಿಗಳು, ಡಿ.ಜಿ.ಎಂ. ಆಯುರ್ವೇದಿಕ್ ಕಾಲೇಜಿನ ವಿದ್ಯಾರ್ಥಿಗಳು, ಆಯುಷ್ ವೈದ್ಯರುಗಳು ಹಾಜರಿದ್ದರು.

ಡಾ. ಅಶೋಕ ಮತ್ತಿಗಟ್ಟಿ ಪ್ರಾರ್ಥಿಸಿದರು. ಆಯುಷ್ ವೈದ್ಯಾಧಿಕಾರಿ ಸಂಜೀವ ನಾರಪ್ಪನವರ ಸ್ವಾಗತಿಸಿದರು. ಡಾ.ಜಯಪಾಲಸಿಂಗ್ ಸಮೂರೇಕರ್ ವಂದಿಸಿದರು. ಡಾ. ಸಾಯಿಪ್ರಕಾಶ ಮಡಿವಾಳರ ಕಾರ್ಯಕ್ರಮ ನಿರೂಪಿಸಿದರು.

### ಚಿತ್ರಕಲೋತ್ಸವದ ಪರಿಚಯ ಪತ್ರಿಕೆ ಬಿಡುಗಡೆಗೊಳಿಸಿದ ಎಸ್.ವಿ. ಸಂಕನೂರ

## ವೃತ್ತಿ ನಿರ್ವಹಣೆಗೆ ಪ್ರತಿಯೊಬ್ಬನೂ ಕಲಾವಿದನಾಗಬೇಕು



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬನಲ್ಲಿ ಒಬ್ಬ ಕಲಾವಿದನಿರುತ್ತಾನೆ. ಆ ಕಲಾವಿದ ಚಿತ್ರಕಲಾವಿದನೇ ಆಗಿರಬಹುದು ಅಥವಾ ವೈದ್ಯ, ಇಂಜಿನಿಯರ್, ರೈತ ಹೀಗೆ ಯಾವುದೇ ವೃತ್ತಿಯಲ್ಲಿದ್ದರೂ ಆ ವೃತ್ತಿಯ ನಿರ್ವಹಣೆಗೆ ಪ್ರತಿಯೊಬ್ಬನಲ್ಲಿ ಒಬ್ಬ ಕಲಾವಿದನಿರಲೇಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅಭಿಪ್ರಾಯಪಟ್ಟರು.

ಅವರು ನಗರದ ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆ ಆಶ್ರಯದಲ್ಲಿ 2023-24ನೇ ಸಾಲಿನ ರಾಷ್ಟ್ರಮಟ್ಟದ 'ಚಿಣ್ಣರ ಚಿತ್ರ ಚಿತ್ತಾರ' ಚಿತ್ರಕಲೋತ್ಸವದ ಪರಿಚಯ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದರು.

ಕಳೆದ ವರ್ಷ ರಾಜ್ಯ ಮಟ್ಟದ ಚಿಣ್ಣರ ಚಿತ್ರ ಚಿತ್ತಾರ ಚಿತ್ರಕಲೋತ್ಸವ ಯಶಸ್ವಿಯಾಗಿ ನಡೆದಿದ್ದು, ಈ ಬಾರಿ ರಾಷ್ಟ್ರಮಟ್ಟದ ಚಿತ್ರಕಲೋತ್ಸವ ಗದಗಿನಲ್ಲಿ ನಡೆಯುತ್ತಿರುವುದು ಪ್ರತಿಯೊಬ್ಬರೂ ಹೆಮ್ಮೆ ಪಡಬೇಕಾದ ಸಂಗತಿಯಾಗಿದೆ. ಚಿಣ್ಣರ ಚಿತ್ರ ಚಿತ್ತಾರ ಚಿತ್ರಕಲೋತ್ಸವಕ್ಕೆ ತಾವು ಸಂಪೂರ್ಣವಾಗಿ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಸಾನ್ನಿಧ್ಯ ವಹಿಸಿದ್ದ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದ ಜಯಂತಿ ಅಕ್ಕನವರು ಮಾತನಾಡಿ, ಇಂದಿನ ದಿನಗಳಲ್ಲಿ ಮಕ್ಕಳಲ್ಲಿ ಸೃಜನಶೀಲತೆ ಬೆಳೆಸಬೇಕಾದ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ನಾವೆಲ್ಲ ಮಕ್ಕಳಲ್ಲಿ ನೈತಿಕತೆಯ ಜೊತೆಗೆ ಸೃಜನಶೀಲತೆಯನ್ನು ಬೆಳೆಸಬೇಕು. ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆಯಿಂದ ಮಕ್ಕಳ ಸರ್ವಾಂಗೀಣ ವ್ಯಕ್ತಿತ್ವ ವಿಕಾಸಕ್ಕೆ ಪೂರಕವಾಗಿ ಸಾಕಷ್ಟು ರಚನಾತ್ಮಕ ಕಾರ್ಯಗಳು ನಡೆಯುತ್ತಿರುವುದು ಸಂತಸದ ಸಂಗತಿ. ಜೊತೆಗೆ ಗದಗಿನಲ್ಲಿ ರಾಷ್ಟ್ರಮಟ್ಟದ ಚಿಣ್ಣರ ಚಿತ್ರ ಚಿತ್ತಾರ ಚಿತ್ರಕಲೋತ್ಸವ ಹಮ್ಮಿಕೊಂಡಿದ್ದು, ಬಣ್ಣದ ಮನೆಯ ಮೂಲಕ ಚಿತ್ರಕಲಾ ಕ್ಷೇತ್ರದಲ್ಲಿಯೂ ಗದುಗಿನ ಘನತೆ ಹೆಚ್ಚುವಂತಾಗಿದೆ ಎಂದು ಹೇಳಿದರು.


ಬಣ್ಣದ ಮನೆ ಸಾಂಸ್ಕೃತಿಕ ವೇದಿಕೆಯ ವಿಜಯ ಕಿರೇಸೂರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಜೆ.ಎನ್. ಜಿತ್ರಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ.ಎಲ್. ಚವ್ಹಾಣ್, ವಿಜಯ ಕಲಾ ಮಂದಿರದ ಪ್ರಾಚಾರ್ಯ ಕೃಷ್ಣ ಕೆ.ಎಮ್, ಬಿಇಓ ಆರ್.ಎಸ್. ಬುರಡಿ, ಮಹಾಂತೇಶ್ ಜಿ.ಹೂಗಾರ, ನೀಲೂ ರಾಠೋಡ್, ಪ್ರವೀಣ್ ಕಿರೇಸೂರ್, ರಿಯಾಜ್ ನಮಾಜಿ ಸೇರಿದಂತೆ ಇತರರು ಇದ್ದರು.

## ಕಾಂಗ್ರೆಸ್ ವತಿಯಿಂದ ಒನಕೆ ಓಬವ್ವ ಜಯಂತಿ ಆಚರಣೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಮತ್ತು ಗದಗ ಜಿಲ್ಲಾ ಯುವ ಕಾಂಗ್ರೆಸ ಸಮಿತಿ ವತಿಯಿಂದ ವೀರರಾಣಿ ಒನಕೆ ಓಬವ್ವ ಜಯಂತಿ ಕಾರ್ಯಕ್ರಮವನ್ನು ಶನಿವಾರ ಬೆಳಿಗ್ಗೆ 10.30ಕ್ಕೆ ದಿ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಛೇರಿಯಲ್ಲಿ ಆಚರಿಸಲಾಗುತ್ತಿದೆ.

ಈ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪಧಾದಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು-ಪದಾಧಿಕಾರಿಗಳು, ಜಿ.ಪಂ, ತಾ.ಪಂ, ಗ್ರಾ.ಪಂ, ಎಪಿಎಂಸಿ ಪಕ್ಷದ ಅಧ್ಯಕ್ಷರು-ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು-ಸದಸ್ಯರು, ಮಹಿಳಾ



ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರಿಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗಗಳ ಅಧ್ಯಕ್ಷರು ಹಾಗೂ ಸದಸ್ಯರು, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಶಹರ ಕಾಂಗ್ರೆಸ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

# ರೈತ ಬಾಂಧವರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ವ್ಯಾಪ್ತಿಯ ರೈತ ಬಾಂಧವರ ಮಾಹಿತಿಗಾಗಿ ತಿಳಿಸುವುದೇನೆಂದರೆ ಪ್ರತಿಯೊಬ್ಬ ರೈತರು ಸರಕಾರದ ಸೌಲಭ್ಯಗಳು ಹಾಗೂ ಸಹಾಯಧನ ಪಡೆಯಲು ರೈತರು ತಮಗೆ ಸಂಬಂಧಪಟ್ಟ ಎಲ್ಲಾ ಜಮೀನುಗಳನ್ನು ( ಫ್ರೂಟ್ಸ್ ತಂತ್ರಾಂಶ) ಎಫ್.ಐ.ಡಿ ಗೆ ಕಡ್ಡಾಯವಾಗಿ ಜೋಡಣೆ ಮಾಡಿಸಬೇಕು. ಈಗಾಗಲೇ ಎಫ್.ಐ.ಡಿ. ಮಾಡಿಸಿಕೊಂಡ ರೈತರು ತಮ್ಮ ಎಫ್.ಐ.ಡಿ. ಗೆ ಎಲ್ಲ ಜಮೀನಿನ ಸರ್ವೆ ನಂಬರುಗಳು ಜೋಡಣಿಯಾಗಿದೆಯೋ ಅಥವಾ ಇಲ್ಲವೋ ಎಂದು ಕೂಡಲೇ ಪರಿಶೀಲಿಸಿಕೊಳ್ಳಿ ಮತ್ತು ಜಂಟಿ ಖಾತೆದಾರರಿದ್ದಲ್ಲಿ ಪ್ರತಿ ಒಬ್ಬ ಜಂಟಿ ಖಾತೆದಾರರು ಪ್ರತ್ಯೇಕವಾಗಿ ಸೌಲಭ್ಯವನ್ನು ಪಡೆಯಬೇಕೆಂದಲ್ಲಿ ಪ್ರತ್ಯೇಕವಾಗಿ ಎಫ್.ಐ.ಡಿ. ಮಾಡಿಸಿಕೊಳ್ಳಬೇಕು.

ಎಫ್.ಐ.ಡಿ. ಮಾಡಿಸದೇ ಇದ್ದಲ್ಲಿ ರೈತರಿಗೆ ಬರುವ ಯಾವುದೇ ಪರಿಹಾರದ ಹಣ ರೈತರ ಖಾತೆಗೆ ಜಮೆ ಆಗುವುದಿಲ್ಲ.

ರೈತ ಬಾಂಧವರು ಈ ಕೂಡಲೇ ತಮಗೆ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಹುಲಕೋಟಿ/ಬೆಟಗೇರಿ ಅಥವಾ ಸಹಾಯಕ ಕೃಷಿ ನಿರ್ದೇಶಕರ ಗದಗ ಕಚೇರಿ ಅಥವಾ ಕಂದಾಯ ಇಲಾಖೆ ಗದಗ ಅಥವಾ ಗ್ರಾಮ ▶▶ 3ನೇ ಪುಟಕ್ಕೆ

## ಸಾಕ್ಷಿ ಸುಭಾಷಿತ

ದಾನದಿಂದ ಗೌರವ ಬರುವುದೇ
ವಿನಾ ಹಣವನ್ನು ಕೂಡಿಡುವುದರಿಂದಲ್ಲ
–ಸುಭಾಷಿತ

## ಸಂಪಾದಕೀಯ

# ಲಿಂಗಾಯತ ಮತಗಳ ಮೇಲೆ ಬಿಜೆಪಿ ಕಣ್ಣು

ರಾಜ್ಯ ಬಿಜೆಪಿ ಘಟಕಕ್ಕೆ ನೂತನ ಸಾರಥಿಯ ನೇಮಕವಾಗಿದೆ. ನಿರೀಕ್ಷೆಯಂತೆ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಅವರ ಪುತ್ರ ವಿಜಯೇಂದ್ರ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಪಟ್ಟ ಕಟ್ಟಲಾಗಿದೆ. ಆ ಮೂಲಕ ಲೋಕಸಭೆ ಚುನಾವಣೆಯಲ್ಲಿ ಪ್ರಬಲ ಲಿಂಗಾಯತ ಸಮುದಾಯದ ಮತಗಳಿಕೆ ಮೇಲೆ ಕಣ್ಣಿಟ್ಟಿದೆ.

ವಿಧಾನಸಭೆ ಚುನಾವಣೆಯ ಸೋಲಿನ ಬಳಿಕ ನಳಿನ್ ಕುಮಾರ್ ಕಟೀಲ್ ಅವರು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಅಲ್ಲಿಂದ ಕಗ್ಗಂಟಾಗಿಯೇ ಉಳಿದಿದ್ದ ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆ ಕಸರತ್ತು ಇಂದು ಅಂತ್ಯ ಕಂಡಿದೆ.

ವಿಜಯೇಂದ್ರ ಅವರು ಶಿಕಾರಿಪುರ ಶಾಸಕರಾಗಿರುವ ಜೊತೆಗೆ ತಂದೆಯಿಂದ ಕಲಿತ ಪಕ್ಷ ಸಂಘಟನೆ ಮತ್ತು ಅವರ ಆಶೀರ್ವಾದದಿಂದ ದೊರೆತ ರಾಜ್ಯಾಧ್ಯಕ್ಷ ಸ್ಥಾನವನ್ನ ಎಷ್ಟರಮಟ್ಟಿಗೆ ಸಮರ್ಥವಾಗಿ ನಿರ್ವಹಿಸುತ್ತಾರೆ ಎನ್ನುವುದು ಇನ್ಮುಂದೆ ಕಾದು ನೋಡಬೇಕಿದೆ. ಕಾರಣ, ಬಿಜೆಪಿಯಲ್ಲಿ ಕೆಲವರಿಗೆ ವಿಜಯೇಂದ್ರ ಆಯ್ಕೆ ಕುರಿತು ಎದ್ದಿರುವ ಅಸಮಾಧಾನ.


ವಿಜಯೇಂದ್ರ ಆಯ್ಕೆ ಏನೇ ಇರಲಿ, ಮುಂಬರುವ ಲೋಕಸಭೆ ಚುನಾವಣೆಯನ್ನು ದೃಷ್ಟಿಯಲ್ಲಿಟ್ಟುಕೊಂಡು ಬಿಜೆಪಿ ಈ ನಿರ್ಣಯ ಕೈಗೊಂಡಿದೆ. ಗ್ಯಾರಂಟಿ ಕಾರ್ಯಕ್ರಮದಿಂದ ಸೋತು ಸಣ್ಣವಾಗಿರುವ ಬಿಜೆಪಿ ಮತ್ತೊಮ್ಮೆ ಜಾತಿ– ಧರ್ಮ ಆಧಾರಿತ ರಾಜಕಾರಣಕ್ಕೆ ಮುಂದಾಗಿದೆ.

ವಿಧಾನಸಭೆ ಪ್ರತಿಪಕ್ಷ ನಾಯಕನ ಆಯ್ಕೆಯಾಗದಿದ್ದರೂ ಪಕ್ಷದ ರಾಜ್ಯಾಧ್ಯಕ್ಷ ಹುದ್ದೆಯನ್ನ ಮೊದಲು ಘೋಷಣೆ ಮಾಡಿದ್ದು, ಬಿಜೆಪಿಗೆ ಸಾಂವಿಧಾನಿಕ ಹುದ್ದೆಗಿಂತ ತಮ್ಮ ಪಕ್ಷ ಸಂಘಟನೆ ಮತ್ತು ಚುನಾವಣೆಯೇ ಮುಖ್ಯ ಎನ್ನುವುದು ಮತ್ತೊಮ್ಮೆ ಸಾಬೀತಾಗಿದೆ. ಪ್ರತಿಪಕ್ಷದ ನಾಯಕನಿಲ್ಲದೆ ಅಧಿವೇಶನ ಕಳೆದು, ಚಳಿಗಾಲದ ಅಧಿವೇಶನ ಆರಂಭವಾಗುವ ಕಾಲ ಸನ್ನಿಹಿತವಾಗುತ್ತಿದ್ದರೂ ಪ್ರತಿಪಕ್ಷದ ನಾಯಕನನ್ನು ಆಯ್ಕೆ ಮಾಡಿಕೊಂಡಿಲ್ಲ.

ಸದ್ಯ ಪ್ರಬಲ ಲಿಂಗಾಯತ ಸಮುದಾಯದ ನಾಯಕನಿಗೆ ರಾಜ್ಯಾಧ್ಯಕ್ಷ ಪಟ್ಟ ಕಟ್ಟಿರುವುದು ನೋಡಿದರೆ, ದಕ್ಷಿಣ ಕರ್ನಾಟಕದ ಪ್ರಬಲ ಒಕ್ಕಲಿಗ ಸಮುದಾಯದ ನಾಯಕನಿಗೆ ಪ್ರತಿಪಕ್ಷ ನಾಯಕ ಪಟ್ಟ ಕಟ್ಟುವುದು ನಿಶ್ಚಿತವಾಗಿದೆ. ಕಾಲ, ದೇಶ ಬದಲಾದರೂ ಜಾತಿ ಆಧಾರಿತ ರಾಜ–ಕಾರಣ ಮಾತ್ರ ಬದಲಾಗದಿರುವುದು ಮತ್ತೆ ಮತ್ತೆ ಸಾಬೀತಾಗುತ್ತಿದೆ.

## ಒನಕೆ ಓಬವ್ವ ಜಯಂತಿಯ ನಿಮಿತ್ತ ಸಾಂದರ್ಭಿಕ ಲೇಖನ

# ಕನ್ನಡ ನಾಡಿನ ನಾರಿಯರ ಶೌರ್ಯದ ಸಂಕೇತ–ಓಬವ್ವ



ಮಾನವೀಯತೆಯ ಮೇರು ಶಕ್ತಿಯಾಗಿ, ಜೀವ–ಜೀವನದ ಸ್ಫೂರ್ತಿಯಾಗಿ, ಅಂತ್ಯವಿಲ್ಲದ ಅಂತಃಕರಣದ ಅದಿತೆಯಾಗಿ, ಆಡಳಿತ ಚತುರೆಯಾಗಿ, ಅಗತ್ಯ ಬಂದಾಗ ದೇಶದ ಮಗಳಾಗಿ ನೆಲದ ರಕ್ಷಕಿಯಾಗಿ ಸಿಡಿದೆದ್ದು ನಿಂತವಳು ಕನ್ನಡ ಮಣ್ಣಿನ ಮಹಿಳೆ, ತೊಟ್ಟಿಲು ತೂಗುವ ಕೈ ದೇಶವನ್ನು ಆಳಬಲ್ಲದು ಎಂದು ಸಾಬೀತುಪಡಿಸಿ ಇತಿಹಾಸದಲ್ಲಿ ದಾಖಲಾಗಿದ್ದಾರೆ.

ಇತಿಹಾಸದಲ್ಲಿ ಮಹಿಳೆಯರು ಅಂದಾಕ್ಷಣ ನೆನಪಿಗೆ ಬರುವವರು ಸ್ವಾತಂತ್ರ್ಯಕ್ಕಾಗಿ, ತಮ್ಮ ನೆಲ, ಸಂಸ್ಕೃತಿಯನ್ನು ಉಳಿಸಲು ಉಸಿರಿರುವವರೆಗೆ ಹೋರಾಡಿದ ಕಿತ್ತೂರು ರಾಣಿ ಚನ್ನಮ್ಮ, ಉಳ್ಳಾಲದ ರಾಣಿ ಅಬ್ಬಕ್ಕ, ಬೆಳವಡಿ ಮಲ್ಲಮ್ಮ, ಕೆಳದಿ ಚೆನ್ನಮ್ಮ, ಒನಕೆ ಓಬವ್ವ ಮೊದಲಾದವರು. ಒಬ್ಬೊಬ್ಬರದೂ ಒಂದೊಂದು ಕಥೆಯಾದರೂ ಉದ್ದೇಶ ಮಾತ್ರ ಒಂದೇ. ಅದು ರಾಜ್ಯದ ರಕ್ಷಣೆ, ಪ್ರಜೆಗಳ ಪರಿಪಾಲನೆ. ಅಂತಹ ವೀರ ವನಿತೆಯರ ಸಾಲಿಗೆ ಸೇರುವ ವೀರ ಮಹಿಳೆ ಚಿತ್ರದುರ್ಗದ ಒನಕೆ ಓಬವ್ವ.

ಪ್ರತಿ ವರ್ಷದ ನವೆಂಬರ್ 11ರಂದು ಇಡೀ ಕನ್ನಡ ನಾಡು ಒನಕೆ ಓಬವ್ವ ಜಯಂತಿ ಆಚರಣೆ ಮಾಡಿ ಆ ವೀರ ರಮಣಿಯನ್ನು ಸ್ಮರಿಸುತ್ತದೆ. ಇತಿಹಾಸದಲ್ಲಿ ಮಹತ್ತರ ಮೌಲ್ಯವಿರುವ ಚಿತ್ರದುರ್ಗ ಜಿಲ್ಲೆ, ಶೌರ್ಯ, ತ್ಯಾಗ, ಹಾಗೂ ಶ್ರೀಮಂತ ಸಂಪ್ರದಾಯವನ್ನು ಮೆರೆದಿದೆ. ಇಲ್ಲಿನ ಕಲ್ಲಿನ ಕೋಟೆ ಅಥವಾ ಏಳು ಸುತ್ತಿನ ಕೋಟೆ ಇತಿಹಾಸದ ಪುಟಗಳಲ್ಲಿ ಚಿರಸ್ಥಾಯಿ. ಚಿತ್ರದುರ್ಗದ ಕೋಟೆಯ ಪಾಳೆಗಾರನಾಗಿದ್ದ ಮದಕರಿ ನಾಯಕನ ಕೋಟೆಯ ಕಾವಲುಗಾರ ಕಹಳೆ ಮದ್ದಹನುಮಪ್ಪನ ಹೆಂಡತಿಯೇ ಓಬವ್ವ.

ಒನಕೆ ಓಬವ್ವ ಕೂಡ್ಲಿಗಿ ತಾಲೂಕಿನ ಗುಡೇಕೋಟೆಯ ಛಲವಾದಿ ಕಹಳೆ ಚಿನ್ನಪ್ಪನ ಮಗಳು. 1761ರಲ್ಲಿ ಚಿತ್ರದುರ್ಗದ ಕೋಟೆಯ ಪಾಳೆಗಾರನಾಗಿದ್ದ ಮದಕರಿ ನಾಯಕನ ಕೋಟೆಯ ಕಾವಲುಗಾರ ಚಲವಾದಿ ಸಮುದಾಯದ ಕಹಳೆ ಮದ್ದಹನುಮಪ್ಪನವರ ಜೊತೆ ಓಬವ್ವರ ವಿವಾಹ ಜರುಗಿತು. ಅಲ್ಲಿಂದ ಓಬವ್ವ ದುರ್ಗದ ನೆಲಕ್ಕೆ ಅಡಿ ಇಡುತ್ತಾಳೆ.

ಹೈದರಾಲಿಯು ಚಿತ್ರದುರ್ಗದ ಮೇಲೆ 1766ರಲ್ಲಿ ಹಠಾತ್ತಾಗಿ ಆಕ್ರಮಣ ಮಾಡುತ್ತಾನೆ. ಏನೂ ತಿಳಿಯದ ಸಾಮಾನ್ಯ ಸದ್ಗೃಣಿಯಾಗಿದ್ದ ಕಾವಲುಗಾರನ ಹೆಂಡತಿಯ ಹೋರಾಟದ ಕಥೆ ಜಗತ್ತೇ ಮೆಚ್ಚುವಂತೆ ಮಾಡುತ್ತದೆ. ಹೈದರಲಿಯ ಸೈನಿಕರು ಒಬ್ಬೊಬ್ಬರಾಗಿ ಕಳ್ಳ ದಾರಿಯ ಕಿಂಡಿಯಲ್ಲಿ ನುಸುಳಿ ಬರುವುದೇ ತಡ, ಓಬವ್ವ ಅವರ ತಲೆಯನ್ನು ಒನಕೆಯಿಂದ ಹೊಡೆದು ಕೆಡವುತ್ತಿದ್ದಳು. ಸಾಕ್ಷಾತ್ ದುರ್ಗದ ದುರ್ಗೆಯ ಅವತಾರ ಕಂಡು ಅವಳ ಪತಿಯೂ ಅಚ್ಚರಿಪಟ್ಟ.

ನಂತರ, ಓಬವ್ವನ ಸಮಯ ಸ್ಪಂದನೆಯಿಂದ ಚಿತ್ರದುರ್ಗ ಪಾಳೆಗಾರರರ ದಂಡು ವೈರಿಗಳ ಮೇಲೆ ಮುಗಿಬಿತ್ತು. ಆ ಗೊಂದಲದಲ್ಲಿಯೇ ಕಳ್ಳಕಿಂಡಿಯಿಂದ ಬಂದಿದ್ದ ಶತ್ರುಸೈನಿಕನೊಬ್ಬ ಸಮಯ ಸಾಧಿಸಿ ಮೋಸದಿಂದ ಓಬವ್ವನ ಬೆನ್ನಿಗೆ ಚೂರಿ ಹಾಕಿದ. ಆದರೂ ವೀರಾವೇಷದಿಂದ ಕಾದಾಡಿದ ಓಬವ್ವ ಆ ಶತ್ರು ಸೈನಿಕನನ್ನು ಕೊಂದು ಹೆಮ್ಮೆಯಿಂದ ಸಾರ್ಥಕತೆಯ ಪ್ರಾಣ ಬಿಟ್ಟಳು. ಕನ್ನಡ ನಾಡಿನ ಸ್ವಾಭಿಮಾನ, ಶೌರ್ಯ, ಧೈರ್ಯದ ಪ್ರತೀಕವಾದ ವೀರರಮಣಿ ಓಬವ್ವ ಹೋರಾಡುತ್ತಲೇ ಅಮರಳಾದಳು.

ಕಾವಲುಗಾರನ ಹೆಂಡತಿಯಾದ ಓಬವ್ವನ ಪರಾಕ್ರಮದ ಕುರುಹಾಗಿ ಆ ಕಳ್ಳಗಿಂಡಿಗೆ ಒನಕೆಯ ಓಬವ್ವನ ಕಿಂಡಿ ಎಂಬ ಹೆಸರು ಬಂತು. ಇಂದಿಗೂ ಚಿತ್ರದುರ್ಗದ ಕೋಟೆ ಹಾಗೂ ಓಬವ್ವನ ಕಿಂಡಿ ಪ್ರಚಲಿತವಾಗಿದೆ. ವೀರವನಿತೆಯ ವೀರಕಥನ ಪ್ರತಿಯೊಬ್ಬ ಕನ್ನಡಿಗನಿಗೂ ಪ್ರೇರಣಾದಾಯಿ. ಸರ್ವರಿಗೂ ಒನಕೆ ಓಬವ್ವ ಜಯಂತಿಯ ಶುಭಾಶಯಗಳು.



**– ಈಶ್ವರ ಮೆಡ್ಲೇರಿ.**
ಅಧ್ಯಕ್ಷರು, ಕಸಾಪ, ಲಕ್ಷ್ಮೇಶ್ವರ.

# ನಾವು ಭಿಕ್ಷೆ ಬೇಡುತ್ತಿಲ್ಲ, ಕಾನೂನು ಪ್ರಕಾರ ಬರ ಪರಿಹಾರ ಕೊಡಿ: ಕೇಂದ್ರಕ್ಕೆ ಡಿ ಕೆ ಶಿವಕುಮಾರ್ ಒತ್ತಾಯ

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ರಾಜ್ಯದಲ್ಲಿ ಈ ವರ್ಷ ನೈರುತ್ಯ ಮುಂಗಾರು ಕೈಕೊಟ್ಟು ಬರ ಪರಿಸ್ಥಿತಿ ತೀವ್ರವಾಗಿದೆ. ಈಗಾಗಲೇ ಬರ ಪರಿಹಾರ ಕೋರಿ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ನಾವು ಭಿಕ್ಷೆ ಬೇಡುತ್ತಿಲ್ಲ, ಕಾನೂನು ಪ್ರಕಾರ ಬರ ಪರಿಹಾರ ಬಿಡುಗಡೆ ಮಾಡಿ ಎಂದು ಕೇಂದ್ರ ಸರ್ಕಾರಕ್ಕೆ ಡಿಸಿಎಂ ಡಿಕೆ ಶಿವಕುಮಾರ್ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿ ಇಂದು ಮಾತನಾಡಿದ ಅವರು, ಬಿಜೆಪಿ – ಜೆಡಿಎಸ್ ನವರಿಗೆ ಅನುಕಂಪ ಬಂದು ಬರ ಅಧ್ಯಯನಕ್ಕೆ ಹೊರಟಿದ್ದಾರೆ. ಈಗಾಗಲೇ ಸರ್ಕಾರ ಉತ್ತಮ ಅಧ್ಯಯನ ನಡೆಸಿದೆ. ಕೇಂದ್ರ ಸರ್ಕಾರಕ್ಕೆ ವರದಿ ಕೊಡಲಾಗಿದೆ. ವರದಿಯನ್ನು ಸ್ವೀಕಾರ ಮಾಡಿದ ಕೇಂದ್ರ ಸರ್ಕಾರದ ಅಧ್ಯಯನಕ್ಕೆ ಅಧಿಕಾರಿಗಳನ್ನ ಕಳಿಸಿದರು. 26 ಸಂಸದರು, 19 ಜೆಡಿಎಸ್ ಶಾಸಕರು, 65 ಬಿಜೆಪಿ ಶಾಸಕರು ಪ್ರಧಾನಿಯವರನ್ನು ಭೇಟಿ ಮಾಡಲಿ ಎಂದರು.

ಬರದ ಹಿನ್ನಲೆಯಲ್ಲಿ ಸಂಬಂಧಿಸಿದ ಸಚಿವರನ್ನು ಭೇಟಿ ಮಾಡಿ ಪರಿಹಾರ ಹಣ ಕೊಡಿಸಬೇಕು. ಪ್ರಚಾರಕ್ಕಾಗಿ ಎರಡು ಗಿಡ ನೋಡಿಕೊಂಡು ಬಂದರೆ ಏನಿಲ್ಲ. ನಾವು ಗಿಡಗಳನ್ನು ನೋಡಿದ್ದೇವೆ, ನಿಮ್ಮಿಂದ ರಾಜ್ಯಕ್ಕೆ ಏನಾಗಿದೆ? ನಾವು ಭಿಕ್ಷೆ ಬೇಡುತ್ತಿಲ್ಲ, ಕಾನೂನು ಪ್ರಕಾರ ಹಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ನಿನ್ನೆ ಸಚಿವ ಸಂಪುಟದಲ್ಲಿ 800 ಕೋಟಿ ಬಿಡುಗಡೆ ಮಾಡಿದ್ದೇವೆ. ಕುಡಿಯುವ ನೀರಿನ, ಮೇವು, ಸೇರಿದಂತೆ ಎಲ್ಲದಕ್ಕೂ ಉಪಯೋಗ ಮಾಡಬೇಕು ಎಂದು ಹಣ ಕೊಟ್ಟಿದ್ದೇವೆ ಎಂದರು.

## ನವೆಂಬರ್ 11, ವೀರವನಿತೆ ಒನಕೆ ಓಬವ್ವ ಜಯಂತಿಯ ನಿಮಿತ್ತ ವಿಶೇಷ ಲೇಖನ

# ಕರುನಾಡಿನ ವೀರ ನಾರಿ ಒನಕೆ ಓಬವ್ವ



'ನನಗೆ ಜೀವವಿರುವವರೆಗೂ, ನನ್ನ ಈ ತೋಳಿನ ಮೂಲಕ ರಕ್ತ ಹರಿಯುವವರೆಗೂ, ನಾನು ವೈರಿಗಳ ವಿರುದ್ಧದ ಹೋರಾಟವನ್ನು ಎಂದಿಗೂ ಕೈ ಬಿಡುವುದಿಲ್ಲ' ಎಂದು ಸರೋಜಿನಿ ನಾಯ್ಡು ಹೇಳಿದ ಮಾತು ವೀರವನಿತೆ ಒನಕೆ ಓಬವ್ವಳ ಧೈರ್ಯ, ಸಾಹಸ ಪ್ರದರ್ಶನ ಕುರಿತಂತೆ ಉಲ್ಲೇಖಿತ ಘೋಷವಾಕ್ಯದಂತಿದೆ. ಒನಕೆ ಓಬವ್ವರ ಹೆಸರು ಚಿತ್ರದುರ್ಗದ ಇತಿಹಾಸದಲ್ಲಿ ಮರೆಯಲಾಗದು. ಅವರನ್ನು ಕರ್ನಾಟಕ ವೀರ ವನಿತೆಯರಾದ ಕಿತ್ತೂರು ಚೆನ್ನಮ್ಮ, ಕೆಳದಿ ಚೆನ್ನಮ್ಮ ಮತ್ತು ರಾಣಿ ಅಬ್ಬಕರ ಸಾಲಿನಲ್ಲಿ ಒಬ್ಬರೆಂದು ಪರಿಗಣಿಸಲಾಗಿದೆ.

ಒನಕೆ ಓಬವ್ವಳ ಇತಿಹಾಸದಲ್ಲಿ ಹೈದರ್ ಅಲಿಯ ಕ್ರೂರ ಸೈನಿಕರನ್ನು ತನ್ನ ಕೊನೆಯ ಉಸಿರು ಇರುವವರೆಗೂ ಎದುರಿಸಿದ ಕರ್ನಾಟಕದ ಯೋಧೆ ಎಂದೇ ಹೆಸರುವಾಸಿ. ಹಾಗಾಗಿ ನಮ್ಮ ರಾಜ್ಯ ಸರ್ಕಾರದಿಂದ ನವೆಂಬರ್ 11, 2021ರಿಂದ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ಆಚರಿಸಿಕೊಂಡು ಬರಲಾಗುತ್ತಿದೆ.

ನಾವು ಇತಿಹಾಸಗಳ ಪುಟದಲ್ಲಿ ಹಿಂದಿನ ಸಾಮ್ರಾಜ್ಯಗಳ ಬಗ್ಗೆ ಆಲೋಚಿಸಿದಾಗ, ಮನಸ್ಸಿಗೆ ಬರುವ ಮೊದಲ ಯೋಚನೆಯು ಯೋಧರು, ಕುದುರೆಗಳ ಮೇಲೆ ಕಾದಾಳಿಗಳು ಮತ್ತು ಆ ಯುದ್ಧಗಳು. ರಾಣಿ ಲಕ್ಷ್ಮೀಬಾಯಿ, ಕಿತ್ತೂರು ರಾಣಿ ಚೆನ್ನಮ್ಮ, ರಾಣಿ ಅಬ್ಬಕ್ಕ ಮುಂತಾದ ಅನೇಕ ಮಹಾನ್ ಹೋರಾಟಗಾರರು ನಮ್ಮ ಮನಸ್ಸಿನಲ್ಲಿಯೂ ಸ್ಥಾನ ಪಡೆದಿದ್ದಾರೆ. ಅಂತಹ ಒಂದು ಉದಾಹರಣೆಯೆಂದರೆ ಒನಕೆ ಓಬವ್ವ.

ಕರ್ನಾಟಕದ ಚಿತ್ರದುರ್ಗದಲ್ಲಿ ಹೈದರ್ ಅಲಿಯ ಪಡೆಗಳ ವಿರುದ್ಧ ಏಕಾಂಗಿಯಾಗಿ ಒನಕೆಯೊಂದಿಗೆ ಹೋರಾಡಿದ ಮಹಿಳೆ ಒನಕೆ ಓಬವ್ವ. 18ನೇ ಶತಮಾನದ ಚಿತ್ರದುರ್ಗದ ಕೋಟೆಯ ಪಾಳೆಗಾರನಾಗಿದ್ದ ಮದಕರಿ ನಾಯಕನ ಕಲ್ಲಿನ ಕೋಟೆಯ ಕಾವಲು ಗೋಪುರದ ಕೋಟೆಯ ಕಾವಲುಗಾರ ಕಹಳೆ ಮುದ್ದಹನುಮಪ್ಪನ ಹೆಂಡತಿ.


ಮದಕರಿ ನಾಯಕನ ಆಳ್ವಿಕೆಯಲ್ಲಿ, ಚಿತ್ರದುರ್ಗ ನಗರವನ್ನು ಹೈದರ್ ಅಲಿ ಪಡೆಗಳು ಮುತ್ತಿಗೆ ಹಾಕಿದವು. ಬಂಡೆಗಳ ರಂಧ್ರದ ಮೂಲಕ ವ್ಯಕ್ತಿಯೊಬ್ಬ ಚಿತ್ರದುರ್ಗದ ಕೋಟೆಯನ್ನು ಪ್ರವೇಶಿಸುವುದನ್ನು ಆಕಸ್ಮಿಕವಾಗಿ ನೋಡಿದ ಹೈದರ್ ಅಲಿ ತನ್ನ ಸೈನಿಕರನ್ನು ಆ ರಂಧ್ರದ ಮೂಲಕ ಕಳುಹಿಸುವ ಯೋಜನೆ ಮಾಡಿದ. ಅಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಕಹಳೆ ಊದುವಾತ ಹನುಮ ಊಟ ಮಾಡಲು ಮನೆಗೆ ಹೋಗಿದ್ದ. ಊಟದ ಸಮಯದಲ್ಲಿ ಮದಕರಿ ನಾಯಕನಿಗೆ ಕುಡಿಯಲು ಸ್ವಲ್ಪ ನೀರು ಬೇಕಿತ್ತು, ಆದ್ದರಿಂದ ಅವನ ಹೆಂಡತಿ ಓಬವ್ವ ಕೊಳದಿಂದ ಕೊಡದಲ್ಲಿ ನೀರುತರಲು ಹೋದಳು.

ಆಗ ಶತ್ರು ಸೈನ್ಯವು ರಂಧ್ರದ ಮೂಲಕ ಕೋಟೆಯನ್ನು ಪ್ರವೇಶಿಸಲು ಪ್ರಯತ್ನಿಸುತ್ತಿರುವುದನ್ನು ಅವಳು ಗಮನಿಸಿದಳು. ಆಗ ಊಟ ಮಾಡುತ್ತಿದ್ದ ಪತಿಯನ್ನು ಕರೆಯಲು ಮನಸ್ಸಾಗದೇ, ಆಕೆಯೇ ಮೂಲೆಯಲ್ಲಿ ಇದ್ದ ಒನಕೆ ಹಿಡಿದು, ಕಿಂಡಿಯಿಂದ ನುಸುಳುತ್ತಿದ್ದ ಶತ್ರು ಸೈನಿಕರನ್ನು ಒಬ್ಬೊಬ್ಬರ ತಲೆಗೆ ಬಡಿದು, ಕೊಂದಳು. ಊಟ ಮುಗಿಸಿ ಬಂದ ಮದಕರಿ ನಾಯಕ ಇದನ್ನು ನೋಡಿ, ತನ್ನ ಸೈನ್ಯಕ್ಕೆ ಆದೇಶ ನೀಡಿದನು. ಈ ಹೋರಾಟದ ನಡುವೆ ಓಬವ್ವ ಪ್ರಾಣ ಕಳೆದುಕೊಳ್ಳಬೇಕಾಯಿತು.

ಆಕೆಯನ್ನು ಕನ್ನಡದ ಹೆಣ್ಣಿನ ಅಭಿಮಾನದ ಪ್ರತಿರೂಪವೆಂದು ಪರಿಗಣಿಸಲಾಗಿದೆ.

ಚಿತ್ರದುರ್ಗದ ಕ್ರೀಡಾಂಗಣಕ್ಕೆ ವೀರ ವನಿತೆ ಒನಕೆ ಓಬವ್ವ ಕ್ರೀಡಾಂಗಣ ಎಂಬ ಹೆಸರನ್ನು ಇಡಲಾಗಿದೆ. ಚಿತ್ರದುರ್ಗದ ಜಿಲ್ಲಾಧಿಕಾರಿ ಕಛೇರಿ ಮುಂದೆ ಒನಕೆ ಓಬವ್ವರ ಪ್ರತಿಮೆಯನ್ನು ಸ್ಥಾಪಿಸಲಾಗಿದೆ.

ಒಟ್ಟಾರೆಯಾಗಿ ಓಬವ್ವನವರ ಶೌರ್ಯ, ಮಾತೃಭೂಮಿಯ ಮೇಲಿನ ಭಕ್ತಿ ಅನನ್ಯವಾದದ್ದು. ಇವಳ ಧೈರ್ಯ, ಸಾಹಸ, ಶೌರ್ಯದ ಕಥೆಯನ್ನು ನಾವು ಇಂದಿನ ಮಕ್ಕಳಿಗೆ ಹೇಳಬೇಕಾಗಿದೆ.



**– ಬಸವರಾಜ ಎಮ್.ಯರಗುಪ್ಪಿ.**
ಬಿಆರ್‌ಪಿ, ಶಿರಹಟ್ಟಿ.

# PSI ಮರುಪರೀಕ್ಷೆ ನಡೆಸುವ ರಾಜ್ಯ ಸರ್ಕಾರದ ನಿರ್ಧಾರಕ್ಕೆ ಹೈಕೋರ್ಟ್ ಅಸ್ತು!

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (PSI) ನೇಮಕಾತಿ ಮರು ಪರೀಕ್ಷೆಗೆ ಆದೇಶಿಸಿ ಹಿಂದಿನ ಬಿಜೆಪಿ ನೇತೃತ್ವದ ಸರ್ಕಾರ ಹೊರಡಿಸಿದ್ದ ಆದೇಶವನ್ನು ಹೈಕೋರ್ಟ್ ಶುಕ್ರವಾರ ಎತ್ತಿಹಿಡಿದಿದೆ. ಮರುಪರೀಕ್ಷೆ ನಡೆಸಲು ರಾಜ್ಯ ಸರ್ಕಾರಕ್ಕೆ ಗ್ರೀನ್ ಸಿಗ್ನಲ್ ನೀಡಿದ್ದು, ಆದರೆ ಸ್ವತಂತ್ರ ಸಂಸ್ಥೆ ಮೂಲಕ ಮರುಪರೀಕ್ಷೆ ನಡೆಸುವಂತೆ ಸೂಚನೆ ನೀಡಿದೆ.

545 ಪಿಎಸ್‌ಐ ಹುದ್ದೆಗಳ ನೇಮಕಾತಿಗೆ ನಡೆದ ಪರೀಕ್ಷೆ ಮತ್ತು ಬಳಿಕ ಪ್ರಕಟಿಸಿದ ನೇಮಕಾತಿ ಪಟ್ಟಿಯನ್ನು ರದ್ದುಪಡಿಸಿ ಹೊಸದಾಗಿ ಪರೀಕ್ಷೆ ನಡೆಸಲು ಹೈಕೋರ್ಟ್ ಅವಕಾಶ ಮಾಡಿಕೊಟ್ಟಿದೆ. ನೇಮಕಾತಿ ಪ್ರಕ್ರಿಯೆಯಲ್ಲಿ ನ್ಯಾಯಸಮ್ಮತೆಯನ್ನು ತರಲು ರಾಜ್ಯ ಸರ್ಕಾರವು ಸ್ವತಂತ್ರ ಏಜೆನ್ಸಿಯ ಮೂಲಕ ಹೊಸದಾಗಿ ಪರೀಕ್ಷೆಗಳನ್ನು ನಡೆಸಬೇಕು ಎಂದು ನ್ಯಾಯಾಲಯ ಈ ಸಂದರ್ಭದಲ್ಲಿ ಹೇಳಿದೆ.


ಪಿಎಸ್‌ಐಗಳ ನೇಮಕಾತಿಗೆ ನಡೆದ ಸಂಪೂರ್ಣ ಆಯ್ಕೆ ಪ್ರಕ್ರಿಯೆಯನ್ನು ರದ್ದುಗೊಳಿಸಿ ರಾಜ್ಯ ಸರ್ಕಾರ 2022ರ ಏಪ್ರಿಲ್ 29ರಂದು ಹೊರಡಿಸಿದ್ದ ಅಧಿಸೂಚನೆಯನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ವಜಾಗೊಳಿಸಿ ನ್ಯಾಯಮೂರ್ತಿ ಪಿ ಎಸ್ ದಿನೇಶ್ ಕುಮಾರ್ ಮತ್ತು ನ್ಯಾಯಮೂರ್ತಿ ಟಿ ಜಿ ಶಿವಶಂಕರೇಗೌಡ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿದೆ. ಮರುಪರೀಕ್ಷೆ ಬೇಡ, ಕಳಂಕಿತರನ್ನು ಹೊರತುಪಡಿಸಿ ನೇಮಕಾತಿ ಪಟ್ಟಿಯನ್ನು ಪ್ರಕಟಿಸಲು ಸರ್ಕಾರಕ್ಕೆ ಆದೇಶ ನೀಡಬೇಕು ಎಂದು ಕೋರಿದ್ದ ಅಭ್ಯರ್ಥಿಗಳ ಪರ ದಾವೆಯನ್ನು ತಿರಸ್ಕರಿಸಿದೆ.



ಹಾಸನಾಂಬ ದೇಗುಲದಲ್ಲಿ ದರ್ಶನಕ್ಕೆ ಸರತಿ ಸಾಲಿನಲ್ಲಿ ನಿಂತಿದ್ದಾಗ ವಿದ್ಯುತ್ ಆಘಾತದಿಂದ 17 ಮಂದಿ ಶುಕ್ರವಾರ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

## ಭಾರತದ ಮೊದಲ ಶಿಕ್ಷಣ ಸಚಿವ ಅಬ್ದುಲ್ ಕಲಾಂ ಆಜಾದ್‌ರ ಜನ್ಮದಿನದ ವಿಶೇಷ ಲೇಖನ

# 'ರಾಷ್ಟ್ರೀಯ ಶಿಕ್ಷಣ ದಿನ'ದ ಮಹತ್ವ



ಹಣ ಇದ್ದವನು ಕೆಲವನ್ನು ಮಾತ್ರ ಗೆಲ್ಲಬಲ್ಲ, ಶಿಕ್ಷಣ ಇದ್ದವನು ಜಗತ್ತನ್ನೇ ಗೆಲ್ಲಬಲ್ಲ. ಇದಕ್ಕೆ ಸಾಕ್ಷಿಯಾಗಿ ದೇಶದ ಮಹಾನ್ ನಾಯಕರು ಮಾಡಿರುವ ಸಾಧನೆಗಳ ಪಟ್ಟಿ ತುಂಬಾ ಉದ್ದವಿದೆ. ಈ ಜಗತ್ತಿನಲ್ಲಿ ಶಿಕ್ಷಣ, ವಿದ್ಯೆಗೆ ಇರುವ ಮಾನ್ಯತೆ ಯಾವುದೇ ಭೌತಿಕ ವಿಷಯಗಳಿಗೆ ಶಾಶ್ವತವಾಗಿ ಸಿಗಲು ಸಾಧ್ಯವೇ ಇಲ್ಲ. ಶಿಕ್ಷಣದ ಪ್ರಾಮುಖ್ಯತೆ ಬಗ್ಗೆ ಇಷ್ಟೆಲ್ಲಾ ಪೀಠಿಕೆ ಏಕೆಂದರೆ, ಇಂದು ಶಿಕ್ಷಣದ ಮಹತ್ವ ಸಾರುವ 'ರಾಷ್ಟ್ರೀಯ ಶಿಕ್ಷಣ ದಿನ'. ಭಾರತದ ಮೊದಲ ಶಿಕ್ಷಣ ಸಚಿವ ಅಬ್ದುಲ್ ಕಲಾಂ ಆಜಾದ್ ಅವರ ಜನ್ಮದಿನದ ನೆನಪಿಗಾಗಿ ಪ್ರತಿ ವರ್ಷ ನವೆಂಬರ್ 11ರಂದು ರಾಷ್ಟ್ರೀಯ ಶಿಕ್ಷಣ ದಿನವನ್ನು ಆಚರಿಸಲಾಗುತ್ತದೆ.

ಸ್ವತಂತ್ರ ಭಾರತದ ಮೊದಲ ಶಿಕ್ಷಣ ಸಚಿವ, ಸ್ವಾತಂತ್ರ್ಯ ಹೋರಾಟಗಾರ, ವಿದ್ವಾಂಸ ಮತ್ತು ಖ್ಯಾತ ಶಿಕ್ಷಣ ತಜ್ಞ ಮೌಲಾನಾ ಅಬುಲ್ ಕಲಾಂ ಆಜಾದ್ ಅವರ ಜನ್ಮ ದಿನದಂದೇ ರಾಷ್ಟ್ರೀಯ ಶಿಕ್ಷಣ ದಿನವನ್ನಾಗಿ ಆಚರಿಸಲಾಗುತ್ತದೆ. ಮೌಲಾನಾ ಆಜಾದ್ ಸ್ವತಂತ್ರ ಭಾರತದ ಶಿಕ್ಷಣ ವ್ಯವಸ್ಥೆಯ ರಚನೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸಿದವರು. ಶಾಲೆಗಳು ದೇಶದ ಭವಿಷ್ಯದ ನಾಗರಿಕರನ್ನು ಉತ್ಪಾದಿಸುವ ಪ್ರಯೋಗಾಲಯಗಳಾಗಿವೆ ಎಂದು ಮೌಲಾನಾ ಆಜಾದ್ ಹೇಳಿದ್ದರು.

ಭಾರತದ ಮೊದಲ ಭಾರತೀಯ ತಂತ್ರಜ್ಞಾನ ಸಂಸ್ಥೆ ಅಥವಾ ಐಐಟಿಯಾದ ಐಐಟಿ ಖರಗ್ಪುರವನ್ನು ಸ್ಥಾಪಿಸಿದ್ದು ಮೌಲಾನಾ ಆಜಾದ್. ಭಾರತದಲ್ಲಿ ಸಾಮಾಜಿಕ–ಧಾರ್ಮಿಕ ಮತ್ತು ಸಾಂಸ್ಕೃತಿಕ ಅಂತರ್–ಸಂಪರ್ಕವನ್ನು ಸೃಷ್ಟಿಸಲು ಅವರು ಹಲವಾರು ಸಂಸ್ಥೆಗಳನ್ನು ಸ್ಥಾಪಿಸಿದ್ದಾರೆ. ಲಲಿತ ಕಲಾ ಅಕಾಡೆಮಿ, ಸಂಗೀತ ನಾಟಕ ಅಕಾಡೆಮಿ ಮತ್ತು ಸಾಹಿತ್ಯ ಅಕಾಡೆಮಿಗಳನ್ನೂ ಅವರೇ ಸ್ಥಾಪನೆ ಮಾಡಿದ್ದರು. ಅವರು ಸ್ಥಾಪಿಸಿದ ಸಂಸ್ಥೆಗಳು ಅವರ ದೃಷ್ಟಿಗೆ ಮತ್ತು ಅವರ ದೂರದೃಷ್ಟಿಗೆ ಸಾಕ್ಷಿಯಾಗಿವೆ. ಮಹಿಳೆಯರ ಶಿಕ್ಷಣ, ಕಡ್ಡಾಯ ಸಾರ್ವತ್ರಿಕ ಪ್ರಾಥಮಿಕ ಶಿಕ್ಷಣ, ವೃತ್ತಿಪರ ಶಿಕ್ಷಣದ ಪ್ರಾಮುಖ್ಯತೆ, 14 ವರ್ಷದವರೆಗೆ ಎಲ್ಲಾ ಮಕ್ಕಳಿಗೆ ಉಚಿತ ಮತ್ತು ನ್ಯಾಯಯುತ ಶಿಕ್ಷಣ ಮುಂತಾದವುಗಳನ್ನು ಈ ದಿನದಂದು ಪ್ರಮುಖವಾಗಿ ಒತ್ತಿಹೇಳಲಾಗುತ್ತದೆ.

ಅವರು ಸ್ಥಾಪನೆ ಮಾಡಿದ ಇತರ ಸಂಸ್ಥೆಗಳೆಂದರೆ, ಮೊದಲ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ), ವಿಶ್ವವಿದ್ಯಾಲಯ ಧನಸಹಾಯ ಆಯೋಗ (ಯುಜಿಸಿ), ಭಾರತೀಯ ಸಾಂಸ್ಕೃತಿಕ ಸಂಬಂಧಗಳ ಮಂಡಳಿ (ಐಸಿಸಿಆರ್), ಕೌನ್ಸಿಲ್ ಆಫ್ ಸೈಂಟಿಫಿಕ್ ಅಂಡ್ ಇಂಡಸ್ಟ್ರಿಯಲ್ ರಿಸರ್ಚ್ (ಸಿಎಸ್‌ಐಆರ್) ಮುಂತಾದವು.

1888ರ ನವೆಂಬರ್ 11 ಮೌಲಾನಾ ಅಬುಲ್ ಕಲಾಂ ಅವರ ಜನ್ಮದಿನ. ಅವರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆಗಳನ್ನು ಸ್ಮರಿಸುವ ಸಲುವಾಗಿ ಮೊದಲ ರಾಷ್ಟ್ರೀಯ ಶಿಕ್ಷಣ ದಿನವನ್ನು ಭಾರತದ ಮಾಜಿ ರಾಷ್ಟ್ರಪತಿ ಪ್ರತಿಭಾ ಪಾಟೀಲ್ ಅವರು ನವೆಂಬರ್ 11, 2008ರಂದು ನವದೆಹಲಿಯ ವಿಜ್ಞಾನ ಭವನದಲ್ಲಿ ಮೌಲಾನಾ ಆಜಾದ್ ಅವರ ಸ್ಮರಣಾರ್ಥ ಉದ್ಘಾಟಿಸಿದರು. ಮೌಲಾನಾ ಆಜಾದ್‌ಗೆ ಮರಣೋತ್ತರವಾಗಿ 1992ರಲ್ಲಿ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿ 'ಭಾರತ ರತ್ನ'ವನ್ನು ನೀಡಲಾಯಿತು. ರಾಷ್ಟ್ರೀಯ ಶಿಕ್ಷಣ ದಿನದಂದು, ಆರು ದಶಕಗಳ ಹಿಂದೆ ಶಿಕ್ಷಣ ವ್ಯವಸ್ಥೆಯಲ್ಲಿ ಅಮೂಲಾಗ್ರ ಬದಲಾವಣೆಯನ್ನು ತಂದು ಶಿಕ್ಷಣ ಕ್ಷೇತ್ರದ ಮೇಲೆ ಪರಿಣಾಮ ಬೀರಿದ ಮೌಲಾನಾ ಆಜಾದ್ ಅವರ ಪರಂಪರೆಯನ್ನು ಮುಂದುವರೆಸಲು ಭಾರತೀಯರಾದ ನಾವೆಲ್ಲರೂ ಪಣತೊಡಬೇಕಾಗಿದೆ.



**– ಎಂ.ಎಚ್. ಸವದತ್ತಿ.**
ಶಿಕ್ಷಕರು, ಸರ್ಕಾರಿ ಪ್ರೌಢಶಾಲೆ–ಏಕಲಾಸಪೂರ.

# ಬಿಡದಿವರೆಗೆ ಮೆಟ್ರೋ ಸೇವೆ ವಿಸ್ತರಣೆಗೆ ಚಿಂತನೆ: ಡಿಸಿಎಂ ಡಿಕೆ ಶಿವಕುಮಾರ್



■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಮೆಟ್ರೋ ಸಂಚಾರವನ್ನು ಬಿಡದಿವರೆಗೆ ವಿಸ್ತರಿಸುವ ಕುರಿತು ಚಿಂತನೆ ನಡೆಸಲಾಗಿದೆ ಎಂದು ಬೆಂಗಳೂರು ನಗರಾಭಿವೃದ್ಧಿ ಸಚಿವರು ಆಗಿರುವ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಬಿಡದಿಯಲ್ಲಿ ನೂತನವಾಗಿ ನಿರ್ಮಾಣವಾಗಿರುವ ಟೊಯೊಟಾ ಕಿರ್ಲೋಸ್ಕರ್ ಸಂಸ್ಥೆಯ ತಾಂತ್ರಿಕ ತರಬೇತಿ ಕಟ್ಟಡವನ್ನು ಶುಕ್ರವಾರ ಉದ್ಘಾಟಿಸಿ ಮಾತನಾಡಿದ ಅವರು, ಬಿಡದಿಯ ಅಭಿವೃದ್ಧಿಗಾಗಿ ಸರ್ಕಾರ ಹಲವು ಯೋಜನೆಗಳನ್ನು ಹಾಕಿಕೊಂಡಿರುವುದಾಗಿ ಹೇಳಿದರು.

ಟೊಯೊಟಾ ಕಿರ್ಲೋಸ್ಕರ್ ಸಂಸ್ಥೆ ಆಟೋಮೊಬೈಲ್ ಕ್ಷೇತ್ರದಲ್ಲಿ ಉತ್ತಮ ಹೆಸರುಗಳಿಸಿದ್ದು, ಉತ್ಪಾದನಾ ವಲಯದಲ್ಲಿ ಸಾಕಷ್ಟು ಬದಲಾವಣೆ ತಂದಿದೆ. ಕರ್ನಾಟಕ ರಾಜ್ಯದೊಂದಿಗೆ ವಿವಿಧ ಹೂಡಿಕೆ ಮಾಡುವ ಮೂಲಕ ಟೊಯೊಟಾ ಕಿರ್ಲೋಸ್ಕರ್ ಸಂಸ್ಥೆ ತಂತ್ರಜ್ಞಾನ ಹಾಗೂ ಹೊಸ ಉದ್ಯಮ ಸೃಷ್ಟಿಸುವಲ್ಲಿ ಮುಂಚೂಣಿಯಲ್ಲಿದೆ ಎಂದು ತಿಳಿಸಿದರು.

ಈ ಸಂಸ್ಥೆಯಿಂದ ಬಿಡದಿಯಲ್ಲಿ ಸ್ಥಾಪಿತವಾದ ತಾಂತ್ರಿಕ ತರಬೇತಿ ವಿಭಾಗ ವಿದ್ಯಾರ್ಥಿಗಳ ಕೌಶಲ್ಯ ಹೆಚ್ಚಿಸಿ, ಅವರ ಭವಿಷ್ಯಕ್ಕೆ ಉತ್ತಮ ಅಡಿಪಾಯ ಹಾಕಲಿದೆ ಎಂದರು.

## ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545



**ಲಕ್ಷ್ಮೇಶ್ವರ:** ಬಿ.ವೈ ವಿಜಯೇಂದ್ರ ರಾಜ್ಯ ಬಿಜೆಪಿ ಅಧ್ಯಕ್ಷರಾಗಿ ಆಯ್ಕೆಯಾಗುತ್ತಿದ್ದಂತೆಯೇ

ಲಕ್ಷ್ಮೇಶ್ವರ ತಾಲೂಕಿನ ಶಿಗ್ಲಿ ಗ್ರಾಮದಲ್ಲಿ ಬಿಜೆಪಿ ಕಾರ್ಯಕರ್ತರು ಸಂಭ್ರಮಾಚರಣೆ ಮಾಡಿದರು. ಈ ವೇಳೆ ಲಕ್ಷ್ಮೇಶ್ವರ ತಾಲೂಕು ರೈತಮೋರ್ಚಾ ಅಧ್ಯಕ್ಷ ಡಿ. ವೈ ಹುನಗುಂದ, ಈರಣ್ಣ ಅಕ್ಕೂರ, ಹೆಚ್.ಎಂ ಗುಡೂರ, ಶಂಭು ಹುನಗುಂದ, ಅಶೋಕ ಶಿರಹಟ್ಟಿ, ಕೇಶವ ಗುಲಗಂಜಿ, ರಾಮಣ್ಣ ತಳವಾರ, ಸಂತೋಷ ಡಾಣಗಲ್, ಈರಣ್ಣ ಅಂಬಲಿ ,ಮಲ್ಲೇಶ ಹಂಜಿ, ಬಾಳಿಕಾಯಿ, ಈರಣ್ಣ ಪುಟ್ಟಪ್ಪನವರ, ಮರಿಯಪ್ಪ ಭಬ್ಬಿ ಸೇರಿ ಹಲವರಿದ್ದರು.



ಕನ್ನಡ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ಅಶ್ವಿನಿ ಪ್ರಕಾಶನದ ವತಿಯಿಂದ ಭುವನೇಶ್ವರಿದೇವಿಗೆ ಭಕ್ತಿ-ಭಾವದಿಂದ ಪೂಜೆ ಸಲ್ಲಿಸಿ ಗೌರವ ಸಲ್ಲಿಸಲಾಯಿತು. ಅಶ್ವಿನಿ ಪ್ರಕಾಶನದ ಅಧ್ಯಕ್ಷರಾದ ಡಾ. ವ್ಹಿ.ವ್ಹಿ. ಹಿರೇಮಠ ಕನ್ನಡದ ಬಗ್ಗೆ ಅಭಿಮಾನದ ನುಡಿಗಳನ್ನು ಹೇಳಿದರು. ಸರ್ವ ಸದಸ್ಯರು ಭಾಗಿಯಾಗಿದ್ದರು ಎಂದು ಅಶ್ವಿನಿ ಪ್ರಕಾಶನದ ಕಾರ್ಯದರ್ಶಿ ಪುಟ್ಟರಾಜ ವ್ಹಿ.ಹಿರೇಮಠ ತಿಳಿಸಿದ್ದಾರೆ.

'ವಿಶ್ವ ವಿಜ್ಞಾನ ದಿನಾಚರಣೆ' ಕಾರ್ಯಕ್ರಮದಲ್ಲಿ ಪೂಜ್ಯ ಮ.ನಿ.ಪ್ರ ಶಿವಕುಮಾರ ಮಹಾಸ್ವಾಮಿಗಳು

# ಶ್ರದ್ಧೆ, ಕುತೂಹಲ ಇದ್ದರೆ ಮಾತ್ರ ವಿಜ್ಞಾನ ಕಲಿಕೆ ಸಾಧ್ಯ



ಈ ಪ್ರಕೃತಿ ತನ್ನ ಸರ್ವಸ್ವವನ್ನು ಮಾನವನಿಗೆ ಒಪ್ಪಿಸಿದೆ. ಆದರೆ ಮಾನವ ಅದನ್ನು ಬಳಸಿಕೊಂಡು ಹೋಗುವುದರಲ್ಲಿ ಎಡುವುತ್ತಿದ್ದಾನೆ. ಈ ನಿಟ್ಟಿನಲ್ಲಿ ಸರಕಾರದೊಂದಿಗೆ ಸಾರ್ವಜನಿಕರು ಕೈ ಜೋಡಿಸುವ ಮೂಲಕ ಪರಿಸರ ಸಂರಕ್ಷಣೆಗೆ ಮುಂದಾಗಬೇಕಿದೆ. ಪರಿಸರ ಉಳಿಸಲು ನಾವೆಲ್ಲರೂ ಸಂಕಲ್ಪ ಮಾಡಲೇಬೇಕು. ಜಗತ್ತಿಗೆ ಜ್ಞಾನದ ಬೆಳಕನ್ನು ತೋರಿದ ಗೌತಮ ಬುದ್ಧನ ಹಾಗೆ ನಮ್ಮ ಸುತ್ತಮುತ್ತಲಿರುವ ಪರಿಸರವನ್ನು ಶಾಂತಿನಿಕೇತನವನ್ನಾಗಿ ಮಾಡಬೇಕು ಎಂದು ಶಿವಕುಮಾರ ಸ್ವಾಮೀಜಿಗಳು ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪರಿಸರ ಇಂದು ತನ್ನ ಮೂಲ ಸ್ವಾಭಾವಿಕ ಸ್ಥಿತಿಯನ್ನು ಉಳಿಸಿಕೊಂಡಿಲ್ಲ. ಅಧುನಿಕತೆಯಿಂದಾಗಿ ಎಲ್ಲವೂ ಕೆಡುತ್ತಿದೆ. ಅಭಿವೃದ್ಧಿ ರಾಷ್ಟ್ರಗಳ ಸಂಸ್ಕೃತಿಯನ್ನು ನಾವು ವಿವೇಚನೆ ಇಲ್ಲದೆ ಆಮದು ಮಾಡಿಕೊಳ್ಳುವುತ್ತಿರುವದಿಂದಲೇ ಇಂದು ಪರಿಸರದ ಅಧೋಗತಿಗೆ ಕಾರಣವಾಗಿದೆ. ಇದರ ಪರಿಣಾಮವನ್ನು ನಾವೇ ಅನುಭವಿಸಬೇಕಾಗುತ್ತದೆ. ಕಾಡುಗಳ ನಾಶದಿಂದಾಗಿ ಮಳೆ ಕಡಿಮೆಯಾಗಿ ಕುಡಿಯಲು ನೀರು ಇಲ್ಲದಂತಾಗುತ್ತದೆ. ಹಾಗೆಯೇ ಶುದ್ಧ ಗಾಳಿಯೂ ಇಲ್ಲದಂತಾಗುತ್ತದೆ ಎಂದು ಪೂಜ್ಯ ಮ.ನಿ.ಪ್ರ ಶಿವಕುಮಾರ ಸ್ವಾಮೀಜಿಗಳು ಅಭಿಪ್ರಾಯಪಟ್ಟರು.

ಅವರು ಇಲ್ಲಿನ ಶ್ರೀ ಪಾರ್ವತವ್ವ ಕೋಂ ಹಿರೇಬಸಪ್ಪ ಹಳೆಮನೆ ಸರಕಾರಿ ಪ್ರೌಢಶಾಲೆ ವಿಕಲಸಪೂರದಲ್ಲಿ ಕಪ್ಪತಗುಡ್ಡ ಶ್ರೀ ನಂದಿವೇರಿ ಸಂಸ್ಥಾನಮಠ ಡೋಣಿ ಗದಗ ಹಾಗೂ ಪ್ರೊ. ಸಿಎನ್‌ಆರ್ ರಾವ್ ಇಕೋ ಕ್ಲಬ್ ಅಡಿಯಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ವಿಜ್ಞಾನ ದಿನಾಚರಣೆ'ಯ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಇಕೋ ಕ್ಲಬ್ ಸಂಚಾಲಕ ಎಂ.ಎಚ್ ಸವದತ್ತಿ ಪ್ರಾಸ್ತಾವಿಕವಾಗಿ ಮಾತನಾಡಿ, ಜಗತ್ತಿನ ಯಾವುದೇ ಮೂಲೆಯಲ್ಲಿ ಸಂಶೋಧನೆಗಳು ನಡೆದಾಗ ಮಾಹಿತಿಯನ್ನು ಗೌಪ್ಯವಾಗಿಡದೆ ಎಲ್ಲಾ ರಾಷ್ಟ್ರಗಳೊಂದಿಗೆ ಹಂಚಿಕೊಳ್ಳುವ ಕೆಲಸ ಆಗಬೇಕು. ವಿಜ್ಞಾನದಲ್ಲಿ ನಂಬಿಕೆ ಒಂದು ಸಂಕೀರ್ಣ ಸಮಸ್ಯೆಯಾಗಿದೆ. ಇದು ವಿಜ್ಞಾನಿಗಳು ಕಾರ್ಯನಿರ್ವಹಿಸುವ ವಿಧಾನ ಮತ್ತು ಸಮಾಜದಿಂದ ವಿಜ್ಞಾನವನ್ನು ಗ್ರಹಿಸುವ ವಿಧಾನದ ಮೇಲೆ ಪರಿಣಾಮ ಬೀರುತ್ತದೆ ಎಂದರಲ್ಲದೆ, ಪರಿಸರಕ್ಕೆ ಪೂರಕವಾಗಿ ಸಾವಯವ ತ್ಯಾಜ್ಯಗಳನ್ನು ಗೊಬ್ಬರವಾಗಿಸಿ ಬಳಸುವ ಕುರಿತು ಮಾಹಿತಿ ನೀಡಿದರು.

ವೇದಿಕೆಯ ಮೇಲೆ ಎಸ್‌ಡಿಎಮ್‌ಸಿ ಅಧ್ಯಕ್ಷ ಚೆನ್ನಪ್ಪ ಈರಪ್ಪ ಹೊಳೆಯಾಚೆ, ಭೂದಾನಿಗಳಾದ ಶೇಖರಗೌಡ ಡಿ.ಹಳೇಮನಿ ವಕೀಲರು, ಶಿಕ್ಷಣ ಪ್ರೇಮಿಗಳಾದ ಚಿದಾನಂದ ರೋಣದ, ಶರೀಫ್, ಪ್ರಧಾನ ಗುರುಗಳಾದ ಎಂ.ಡಿ. ಮಾದರ, ಶಿಕ್ಷಕರಾದ ದುರ್ಗಾ ಪ್ರಸಾದ, ಮಂಜು ಎಚ್.ಎಚ್, ಬಿ.ಸಿ. ಜೋಗಿನ ಉಪಸ್ಥಿತರಿದ್ದರು. ಸುಮಾರು 30 ವಿದ್ಯಾರ್ಥಿಗಳಿಂದ ವಿಜ್ಞಾನ ವಸ್ತು ಪ್ರದರ್ಶನ ನೋಡುಗರ ಗಮನ ಸೆಳೆಯಿತು.

ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಅನ್ನದಾನೇಶ್ ಸ್ವಾಗತಿಸಿದರು. ದುಂಡಪ್ಪ ಕಾಗವಾಡೆ ಕಾರ್ಯಕ್ರಮ ನಿರೂಪಿಸಿದರು. ಶರಣಪ್ಪ ಮಲಬಾದಿ ವಂದಿಸಿದರು.

# ರೈತ ಬಾಂಧವರ ಗಮನಕ್ಕೆ

▶▶ಮೊದಲನೇ ಪುಟದಿಂದ

ಒನ್ ಅಥವಾ ಸಿ.ಎಸ್.ಸಿ. ಸೆಂಟರ್‌ಗಳಿಗೆ ಭೇಟಿ ನೀಡಿ ಎಫ್.ಐ.ಡಿ. ಮಾಡಿಸಿಕೊಳ್ಳಬೇಕು. ಎಫ್.ಐ.ಡಿ. ಮಾಡಲು ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕ, ಪಹಣಿ (ಹೊಲದ ಉತಾರ), ದೂರವಾಣಿ ಸಂಖ್ಯೆ , 1 ಭಾವಚಿತ್ರ ( ಫೋಟೋ) ಎಸ್.ಸಿ./ ಎಸ್.ಟಿ. ಇದ್ದಲ್ಲಿ ( ಜಾತಿ ಪ್ರಮಾಣ ಪತ್ರ) ಈ ದಾಖಲೆಗಳನ್ನು ಹಾಜರುಪಡಿಸಬೇಕು. ಹೆಚ್ಚಿನ ಮಾಹಿತಿಗಾಗಿ ಗದಗ ತಾಲೂಕ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯ, ದೂರವಾಣಿ ಸಂಖ್ಯೆ 08372-238773 ಸಂಪರ್ಕಿಸಬಹುದಾಗಿದೆ.

# 'ಏಕೀಕರಣ ರೂವಾರಿಗಳಿಗೆ ನಮನ' ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಸಾಪ ಲಕ್ಷ್ಮೇಶ್ವರ ತಾಲೂಕು ಘಟಕದ ವತಿಯಿಂದ ಕರ್ನಾಟಕ ನಾಮಕರಣದ ಸುವರ್ಣ ಸಂಭ್ರಮದ ಹಿನ್ನೆಲೆಯಲ್ಲಿ 'ಕರ್ನಾಟಕ ಏಕೀಕರಣ ರೂವಾರಿಗಳಿಗೆ ಧನ್ಯ ನಮನ' ಕಾರ್ಯಕ್ರಮವನ್ನು ನ.11ರಂದು ಬೆಳಿಗ್ಗೆ 10ಕ್ಕೆ ಸರ್ಕಾರಿ ಪ್ರೌಢಶಾಲೆ ಬಟ್ಟೂರಿನಲ್ಲಿ ಹಮ್ಮಿಕೊಳ್ಳಲಾಗಿದೆ.

'ಕರ್ನಾಟಕ ಏಕೀಕರಣದ ರೂವಾರಿ ಅಂದಾನಪ್ಪ ದೊಡ್ಡಮೇಟಿ' ಕುರಿತು ಶಿಕ್ಷಣ ಸಂಯೋಜಕ ಉಮೇಶ ಹುಚ್ಚಯ್ಯನಮಠ ಹಾಗೂ ಲಕ್ಷ್ಮೇಶ್ವರ ತಾಲೂಕಿನ ಬಟ್ಟೂರು ಗ್ರಾಮದವರೇ ಆದ ಕನ್ನಡ ಮಾತೆ ಭುವನೇಶ್ವರಿಯ ತೈಲ ವರ್ಣಚಿತ್ರ ಕಲಾವಿದ ಸಿ.ಎನ್. ಪಾಟೀಲ ಕುರಿತು ಬಟ್ಟೂರು ಗ್ರಾ.ಪಂ ಅಧ್ಯಕ್ಷ ಜಗದೀಶಗೌಡ ಪಾಟೀಲ ಮಾತನಾಡಲಿದ್ದಾರೆ.

ಕ್ಷೇತ್ರ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯೋಪಾಧ್ಯಾಯ ವಿ.ಬಿ. ಪಾಟೀಲ ಕಸಾಪ ವಿದ್ಯಾರ್ಥಿ ಘಟಕವನ್ನು ಉದ್ಘಾಟಿಸುವರು.

ಕಸಾಪ ತಾಲೂಕು ಘಟಕದ ಅಧ್ಯಕ್ಷ ಈಶ್ವರ ಮೆಡ್ಲೇರಿ ಅಧ್ಯಕ್ಷತೆ ವಹಿಸುವರು. ಗ್ರಾ.ಪಂ ಸದಸ್ಯರು ಹಾಗೂ ಗಣ್ಯರು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಕಸಾಪ ಪ್ರಕಟಣೆ ತಿಳಿಸಿದೆ.

# ಬೀಚಿ ಬಳಗದ ಪಾಕ್ಷಿಕ ಸಭೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬೀಚಿ ಬಳಗದ ದಶಮಾನೋತ್ಸವಕ್ಕೆ ಒಂದು ತಿಂಗಳು ಮಾತ್ರ ಉಳಿದಿದೆ. ಡಿಸೆಂಬರ್ 10ಕ್ಕೆ ಜರುಗಲಿರುವ ದಶಮನೋತ್ಸವದ ಕಾರ್ಯಗಳು ಭರದಿಂದ ನಡೆಯಬೇಕಾಗಿದೆ. ಅದಕ್ಕೆ ಎಲ್ಲ ಸದಸ್ಯರೂ ಸೂಕ್ತ ಸಹಕಾರ ನೀಡಬೇಕೆಂದು ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಹೇಳಿದರು.

ಗುರುವಾರ ಸಂಜೆ ಇಲ್ಲಿನ ಹಿರೇಮಠದ ಸಭಾಭವನದಲ್ಲಿ ನಡೆದ ಬೀಚಿ ಬಳಗದ ಪಾಕ್ಷಿಕ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಮಾರಂಭಕ್ಕೆ ಬರುವ ಅತಿಥಿಗಳ ವಾಸ್ತವ್ಯಕ್ಕೆ ಈಗಾಗಲೇ ಸಿದ್ಧತೆ ಮಾಡಲಾಗಿದ್ದು, ಸಮಾರಂಭವನ್ನು ಉದ್ಘಾಟಿಸಲು ರೋಣ ಶಾಸಕ ಜಿ.ಎಸ್. ಪಾಟೀಲರನ್ನು ಆಹ್ವಾನಿಸಲಾಗಿದೆ. ಸಮಾರಂಭದ ದಿವ್ಯ ಸಾನ್ನಿಧ್ಯವನ್ನು ವಹಿಸಲು ಹಾಲಕೆರೆಯ ಜಗದ್ಗುರು ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳವರನ್ನು ಮತ್ತು ನೇತೃತ್ವ ವಹಿಸಲು ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶ್ರೀಗಳನ್ನು ಆಮಂತ್ರಿಸಲಾಗಿದ್ದು ಅವರೂ ಸಹ ಆಹ್ವಾನವನ್ನು ಒಪ್ಪಿಕೊಂಡಿದ್ದಾರೆ. ಸ್ಮರಣ ಸಂಚಿಕೆಯ ಪ್ರಧಾನ ಸಂಪಾದಕರು ಮತ್ತು ಸಂಪಾದಕ ಮಂಡಳಿ ಇನ್ನೂ ಚುರುಕಿನಿಂದ ಕಾರ್ಯ ನಿರ್ವಹಿಸಬೇಕೆಂದು ತಿಳಿಸಿದರು.

ಸ್ಮರಣ ಸಂಚಿಕೆಯ ಪ್ರಧಾನ ಸಂಪಾದಕ ಡಾ. ಎಸ್.ಜಿ. ಗುರಿಕಾರ ಮಾತನಾಡಿ, ಸ್ಮರಣ ಸಂಚಿಕೆಗೆ ಬೇಕಾದ ಎಲ್ಲ ಲೇಖನಗಳ ಸಂಗ್ರಹವಾಗಿದೆ ಎಂದರು. ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ ಮಾತನಾಡಿದರು.

ಚರ್ಚೆಯಲ್ಲಿ ನಿವೃತ್ತ ಪ್ರಾಚಾರ್ಯ ಡಿ.ಎ. ಅರವಟಗಿಮಠ, ಡಾ. ಆರ್ ಕೆ. ಗಚ್ಚಿನಮಠ, ನಿಕಟಪೂರ್ವ ಅಧ್ಯಕ್ಷ ಸುರೇಶ ಹಳ್ಳಿಕೇರಿ, ಜಿ.ಎ. ಬೆಲ್ಲದ, ನಿವೃತ್ತ ಯೋಧ ಶಿವಪುತ್ರಪ್ಪ ಸಂಗನಾಳ, ಶಿವಯೋಗಿ ಜಕ್ಕಲಿ, ಬಿ.ಟಿ. ತಾಳಿ, ಎಂ.ಎಚ್. ಸಿದ್ದಿ, ಈಶ್ವರಪ್ಪ ಇಳಕಲ್ಲ, ವಿ.ಎ. ಕುಂಬಾರ, ಎಂ.ಕೆ. ಬೇವಿನಕಟ್ಟಿ, ಉಪಾಧ್ಯಕ್ಷ ಆರ್.ಎಸ್. ನರೇಗಲ್ಲ, ಕಸಾಪ ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ ಮುಂತಾದವರು ಪಾಲ್ಗೊಂಡಿದ್ದರು.

ಜೆ.ಎ. ಪಾಟೀಲ ಸ್ವಾಗತಿಸಿದರು. ಎಚ್.ವಿ. ಈಟಿ ನಿರೂಪಿಸಿದರು. ಸಂಚಾಲಕ ಈಶ್ವರ ಬೆಟಗೇರಿ ವಂದಿಸಿದರು.

# ಸಾಕ್ಷರತಾ ಬೋಧಕರ ತರಬೇತಿ ಕಾರ್ಯಾಗಾರ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಳಗುಂದ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಗುರುತಿಸಲಾದ ಅನರಕ್ಷರಸ್ಥರಿಗೆ ಪಾಠ ಬೋಧನೆ ಮೂಲಕ ಅಕ್ಷರಸ್ಥರನ್ನಾಗಿಸುವ ಉದ್ದೇಶದಿಂದ ನೇಮಕ ಮಾಡಲಾದ ಬೋಧಕರಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಜರುಗಿತು.

ಸಮನ್ವಯಾಧಿಕಾರಿ ಜೆ.ಎ. ಭಾವಿಕಟ್ಟಿ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇಶದಲ್ಲಿ ಹಾಗೂ ರಾಜ್ಯದಲ್ಲಿ 2011ರ ಜನಗಣತಿ ಪ್ರಕಾರ ಶೇ 75ರಷ್ಟು ಅಕ್ಷರಸ್ಥರನ್ನು ಹೊಂದಿದ್ದು ಉಳಿದ ಇನ್ನು ಶೇ 25 ಅನಕ್ಷರಸ್ಥರನ್ನು ಸಾಕ್ಷರರನ್ನಾಗಿ ಮಾಡುವ ಉದ್ದೇಶದಿಂದ ಜಿಲ್ಲಾ ಸಾಕ್ಷರತಾ ಇಲಾಖೆ, ಗದಗ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಸರಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1 ಸಂಯುಕ್ತ ಆಶ್ರಯದಲ್ಲಿ ನವ ಸಾಕ್ಷರತಾ ಕಾರ್ಯಕ್ರಮ ತರಬೇತಿ ಏರ್ಪಡಿಸಿದ್ದು, ಬೋಧಕರಾದವರು ಮನೆ ಮನೆಗಳಲ್ಲಿ ಅಕ್ಷರ ಬೆಳಕನ್ನು ಬೆಳಗುವ ಕಾರ್ಯ ಮಾಡಬೇಕು. ಅನಕ್ಷರಸ್ಥರ ಬಾಳಿಗೆ ಜ್ಞಾನವನ್ನು ಮೂಡಿಸುವಲ್ಲಿ ಬೋಧಕರ ಪಾತ್ರ ಮಹತ್ವದ್ದಾಗಿದೆ ಎಂದರು.

ಸಂಪನ್ಮೂಲ ವ್ಯಕ್ತಿ ಪಿ.ಡಿ. ಮಂಗಳೂರ ಹಾಗೂ ಆರ್.ಬಿ. ಸೋಮನಕಟ್ಟಿ ತರಬೇತಿ ನೀಡಿ ಮಾತನಾಡಿ, ಸಾಕ್ಷರತಾ ಕಾರ್ಯಕ್ರಮದಲ್ಲಿ ಬೋಧನೆ ಮಾಡುವದು ಪುಣ್ಯದ ಕೆಲಸವಾಗಿದೆ. ಅನಕ್ಷರಸ್ಥರನ್ನು ಸಾಕ್ಷರಸ್ಥರನ್ನಾಗಿ ಮಾಡುವುದರಿಂದ ಅವರ ಬಾಳಿಗೆ ಬೆಳಕು ನೀಡಿದಂತಾಗುವುದು ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶಿವಕುಮಾರ ಕುರಿಯವರ, ಮಾಹಾಂತೇಶ ಕೆಂಚನಾಯ್ಕರ, ಸಿಆರ್‌ಪಿ ಎಂ.ಎಂ. ನಿಂಬನಾಯ್ಕರ್, ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಂ.ಎಂ. ಮೇಗಲಮನಿ, ಎಸ್‌ಡಿಎಂಸಿ ಸದಸ್ಯರಾದ ಮಂಜುನಾಥ ಗುಲಗಂಜಿ, ಗುಡುಸಾಬ ಗಾಡಿ, ಕುಸುಮಾ ಬಗಾಡೆ, ತೋಸಿನಾ ಖವಾಸ, ಯಶೋಧಾ ಮಡಿಯಪ್ಪನವರ, ವಿ.ಎಸ್. ಶ್ರೀನಿಧಿ, ಶೀಫಾ ಸಿದ್ದಿ ಇದ್ದರು.

# ಕೆಇಎ ಪರೀಕ್ಷಾ ಅಕ್ರಮದ ಕಿಂಗ್ ಪಿನ್ ಆರ್.ಡಿ ಪಾಟೀಲ್ ಬಂಧನ

■ವಿಜಯಸಾಕ್ಷಿ ಸುದ್ದಿ, ಕಲಬುರಗಿ

ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಕೆಇಎ) ನಡೆಸಿದ್ದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿನ ಅಕ್ರಮ ಪ್ರಕರಣದ ಕಿಂಗ್ ಪಿನ್ ಆರ್.ಡಿ ಪಾಟೀಲ್‌ನನ್ನು ಬಂಧಿಸುವಲ್ಲಿ ಕೊನೆಗೂ ಪೊಲೀಸರು ಯಶಸ್ವಿಯಾಗಿದ್ದಾರೆ.

ಮಹಾರಾಷ್ಟ್ರದಲ್ಲಿ ಆರ್.ಡಿ ಪಾಟೀಲ್ ಅಡಗಿರುವುದನ್ನು ಪತ್ತೆ ಹಚ್ಚಿದ ಕಲಬುರಗಿ ಜಿಲ್ಲಾ ವಿಶೇಷ ಪೊಲೀಸ್ ತಂಡ ಕಾರ್ಯಾಚರಣೆ ನಡೆಸಿ ಆತನನ್ನು ವಶಕ್ಕೆ ಪಡೆದು ಮಹಾರಾಷ್ಟ್ರದಿಂದ ಕಲಬುರಗಿಗೆ ಕರೆತರುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಪೊಲೀಸರು ತನ್ನ ಬಂಧಿಸಲು ಬರುತ್ತಿದ್ದಾರೆ ಎಂಬುದನ್ನು ತಿಳಿದ ಆರ್ ಡಿ ಪಾಟೀಲ್ ನವೆಂಬರ್ 6ರಂದು ಕಲಬುರಗಿಯ ವರ್ಧಾ ಲೇಔಟ್‌ನಲ್ಲಿರುವ ಮಹಾಲಕ್ಷ್ಮೀ ಅಪಾರ್ಟ್‌ಮೆಂಟ್ ಕಾಂಪೌಂಡ್ ಹಾರಿ ಪರಾರಿಯಾಗಿದ್ದನು.

# ನ.18ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಖರಣ ಮತ್ತು ಕ್ರೀಡಾ ಇಲಾಖೆ, ಯುವ ಸಂಘಗಳ ಒಕ್ಕೂಟ, ಆದರ್ಶ ಶಿಕ್ಷಣ ಸಮಿತಿಯ ಶ್ರೀ ಡಿ.ಎಸ್. ಕುರ್ತಕೋಟಿ ಮೆಮೋರಿಯಲ್ ಪದವಿ ಪೂರ್ವ ವಾಣಿಜ್ಯ ಮಹಾವಿದ್ಯಾಲಯ, ಗದಗ-ಬೆಟಗೇರಿ ಇವರ ಸಂಯುಕ್ತ ಆಶ್ರಯದಲ್ಲಿ 2023-24ನೇ ಸಾಲಿನ ಗದಗ ಜಿಲ್ಲಾ ಮಟ್ಟದ ಯುವಜನೋತ್ಸವವನ್ನು ನವೆಂಬರ್ 18 ರಂದು ಬೆಳಿಗ್ಗೆ 10 ಗಂಟೆಗೆ ಗದಗ ಬೆಟಗೇರಿ ನಗರದ ಆದರ್ಶ ಶಿಕ್ಷಣ ಸಮಿತಿಯ ಸುವರ್ಣ ಮಹೋತ್ಸವ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಚಿವರಾದ ಬಿ. ನಾಗೇಂದ್ರ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ರೋಣ ಶಾಸಕ ಜಿ.ಎಸ್.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ಗದಗ ಬೆಟಗೇರಿ ನಗರಸಭೆ ಅಧ್ಯಕ್ಷೆ ಉಷಾ ದಾಸರ, ನಗರಸಭೆ ಉಪಾಧ್ಯಕ್ಷೆ ಸುನಂದಾ ಬಾಕಳೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸಹಕಾರ ಇಲಾಖೆಯ ಪ್ರಧಾನ ಕಾರ್ಯದರ್ಶಿ ಎನ್.ಮಂಜುನಾಥ ಪ್ರಸಾದ್, ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯುಕ್ತರಾದ ಎನ್. ಶಶಿಕುಮಾರ್, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಆಗಮಿಸುವರು.

ಆದರ್ಶ ಶಿಕ್ಷಣ ಸಮಿತಿ ಚೇರ್ಮನ್ ಆನಂದ ಪೋತ್ನೀಸ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ, ಯುವ ಸಂಘಗಳ ಒಕ್ಕೂಟದ ಜಿಲ್ಲಾಧ್ಯಕ್ಷ ರವಿಕಾಂತ ಅಂಗಡಿ, ಆದರ್ಶ ಶಿಕ್ಷಣ ಸಮಿತಿಯ ಡಿ.ಎಸ್. ಕುರ್ತಕೋಟಿ ಮೆಮೋರಿಯಲ್ ಪದವಿ ಪೂರ್ವ ವಾಣಿಜ್ಯ ಮಹಾವಿದ್ಯಾಲಯದ ಪ್ರಾಚಾರ್ಯರರಾದ ಡಾ. ರವೀಂದ್ರಕುಮಾರ್ ಕುಲಕರ್ಣಿ ಸ್ವಾಗತ ಕೋರಿದ್ದಾರೆ.

ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ಕನ್ನಡ ಭಾಷಿಕರ ಪ್ರದೇಶ ವ್ಯಾಪಕವಾಗಿತ್ತು



ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಪೂಜ್ಯ ನಿಜಗುಣಪ್ರಭು ಶ್ರೀಗಳು ಸಂಮಾನ ಸ್ವೀಕರಿಸಿ ಮಾತನಾಡಿ, ಪ್ರಶಸ್ತಿ ಎನ್ನುವುದು ಸೇವೆಯ ಭೂಷಣ, ವ್ಯಕ್ತಿಯ ಭೂಷಣ ಅಲ್ಲ. ವ್ಯಕ್ತಿ ಮಾಡುವ ಸೇವೆಗೆ, ಸಾಧನೆಗೆ ಪ್ರಶಸ್ತಿಗಳು ಲಭಿಸುತ್ತವೆ. ಕನ್ನಡ ಎಂದರೆ ವಚನ, ವಚನ ಎಂದರೆ ಕನ್ನಡ. ಬಸವಣ್ಣನವರು ತಮ್ಮನ್ನು ಅರಸುತ್ತಾ ಬಂದ ಬೇರೆ ರಾಜ್ಯಗಳ ಶರಣರಿಗೂ ಕನ್ನಡ ಕಲಿಸಿದ್ದಲ್ಲದೆ, ಕನ್ನಡದಲ್ಲಿಯೇ ವಚನಗಳನ್ನು ಬರೆಸಿದ್ದಾರೆ. ಬಸವಾದಿ ಪ್ರಮಥರು ಕನ್ನಡ ಭಾಷೆಯನ್ನು ದೇವಭಾಷೆಯನ್ನಾಗಿ ಮಾಡಿದ್ದಾರೆ ಎಂದು ತಿಳಿಸಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀವಿಜಯನು ತನ್ನ 'ಕವಿರಾಜಮಾರ್ಗ'ದಲ್ಲಿ ಕರ್ನಾಟಕದ ಕುರಿತು ವರ್ಣಿಸಿ, ಕನ್ನಡ ನಾಡು ಕಾವೇರಿಯಿಂದ ಗೋದಾವರಿಯವರೆಗೆ ಹರಡಿತ್ತು ಎಂದು ತಿಳಿಸಿದ್ದಾನೆ. ಶ್ರೀವಿಜಯನ ಕಾಲ ಬಸವಾದಿ ಶರಣರಿಗೆ ಅತ್ಯಂತ ಸಮೀಪದ ಕಾಲವಾಗಿತ್ತು. ಇದರಿಂದ ಕನ್ನಡ ಮಾತನಾಡುವವರ ಪ್ರದೇಶ ಗೋದಾವರಿಯವರೆಗೆ ವ್ಯಾಪಿಸಿತ್ತು ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ಮಾತನಾಡಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2666ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಗೋದಾವರಿ ಮತ್ತು ಕಾವೇರಿಯ ಮಧ್ಯದ ಭಾಗ ಬಸವಕಲ್ಯಾಣ ಕನ್ನಡ ಭಾಷಿಕರ ಕೇಂದ್ರ ಸ್ಥಾನವಾಗಿತ್ತು. ಮಹಾರಾಷ್ಟ್ರದ ಔರಂಗಾಬಾದ ಜಿಲ್ಲೆಯಲ್ಲಿ ಕನ್ನಡ ಎಂಬ ಹೆಸರಿನಲ್ಲಿ ತಾಲ್ಲೂಕು ಇದೆ. ಮೊದಲಿಗೆ ಗೋದಾವರಿವರೆಗೆ ಇದ್ದ ಕನ್ನಡ ನಾಡು ಕಾಲಾಂತರದಲ್ಲಿ ಬೇರೆ ಬೇರೆ ಆಳ್ವಿಕೆಗೆ ಒಳಪಟ್ಟು ಸೊರಗಿತು. ಮಹಾರಾಷ್ಟ್ರದಲ್ಲಿ ಲಭಿಸಿರುವ ಶಾಸನಗಳಲ್ಲಿ 100ಕ್ಕೆ 90ರಷ್ಟು ಶಾಸನಗಳು ಕನ್ನಡದಲ್ಲಿವೆ ಎಂದರು.

ಡೆಪ್ಯೂಟಿ ಚನ್ನಬಸಪ್ಪನವರು ಪ್ರತಿ ಹಳ್ಳಿಗಳಲ್ಲಿಯೂ ಕನ್ನಡ ಶಾಲೆಗಳನ್ನು ತೆರೆಯಲು ತೀರ್ಮಾನ ಕೈಗೊಂಡರು. ಕರ್ನಾಟಕ ಏಕೀಕರಣಕ್ಕಾಗಿ ಡೆಪ್ಯೂಟಿ ಚನ್ನಬಸಪ್ಪನವರು, ಆಲೂರು ವೆಂಕಟರಾಯರು, ಹುಯಿಲಗೋಳ ನಾರಾಯಣರಾಯರು ಸೇರಿದಂತೆ ಸಾಕಷ್ಟು ಜನರ ಸೇವೆ, ಶ್ರಮ, ಶ್ರದ್ಧೆಗಳು ಕಾರಣವಾಗಿವೆ ಎಂದು ಶ್ರೀಗಳು ಸ್ಮರಿಸಿದರು.

ಸಹಾಯಕ ಪ್ರಾಧ್ಯಾಪಕ ಡಾ. ಗಾದೆಪ್ಪ ಉಪನ್ಯಾಸ ನೀಡಿ, ಕನ್ನಡ ಎಂದರೆ ಭಾಷೆ, ಕನ್ನಡಿಗ ಎಂದರೆ ಭಾಷಿಕ, ಕರ್ನಾಟಕ ಎಂದರೆ ಕನ್ನಡಿಗರೆಲ್ಲರೂ ಕೂಡಿಕೊಂಡು ವಾಸಿಸುವ ಒಂದು ಭೂಪ್ರದೇಶ. ಕರ್ನಾಟಕತ್ವ ಎಂಬ ಪದವನ್ನು ಮೊದಲಿಗೆ ಆಲೂರ ವೆಂಕಟರಾಯರು ಬಳಸಿದರು. ಕರ್ನಾಟಕತ್ವ ಎಂದರೆ ನಮ್ಮ ಕರ್ನಾಟಕದ ಸಂಸ್ಕೃತಿಗೆ ಪರಂಪರೆಗೆ ಬದ್ಧವಾಗಿರುವದು. ಕರ್ನಾಟಕದಲ್ಲಿ ರಾಜಕಾರಣ, ಧರ್ಮ, ಇತಿಹಾಸ, ಕಲೆ, ಸಂಸ್ಕೃತಿ ಎಲ್ಲವೂ ಇದೆ. ಮೌರ್ಯರು, ಕದಂಬರು, ಮೈಸೂರು ಒಡೆಯರ ರಾಜ್ಯದವರೆಗೆ ಕನ್ನಡದ ಶಾಸನಗಳು ಲಭಿಸುತ್ತವೆ ಎಂದರು.

ಧೀರಣ್ಣ ಹುಯಿಲಗೋಳ ಮಾತನಾಡಿ, ವಿದ್ಯಾದಾನ ಸಮಿತಿಗೆ ರಾಜ್ಯೋತ್ಸವ ಪ್ರಶಸ್ತಿ ಲಭಿಸಿರುವುದಕ್ಕೆ ಸಂಸ್ಥೆಯ ಹಿರಿಯರು, ಸಿಬ್ಬಂದಿಗಳು, ವಿದ್ಯಾರ್ಥಿಗಳ ಪರಿಶ್ರಮ ಮತ್ತು ಸಫಲತೆ ಕಾರಣವಾಗಿದೆ ಎಂದು ಸ್ಮರಿಸಿದರು.

ಜೆ.ಸಿ. ಪ್ರೌಢಶಾಲೆಯ ವಿದ್ಯಾರ್ಥಿಗಳಿಂದ ಗೀತಗಾಯನ ಹಾಗೂ ನೃತ್ಯ ನಡೆಯಿತು. ಪ್ರತಿಕ್ಷಾ ಎಂ.ತುಕ್ಕಪ್ಪನವರ ಧರ್ಮಗ್ರಂಥ ಪಠಣಗೈದರು. ಸ್ಪಂದನಾ ಎಂ.ತುಕ್ಕಪ್ಪನವರ ವಚನ ಚಿಂತನ ನಡೆಸಿಕೊಟ್ಟರು. ಶಿವಾನುಭವ ಭಕ್ತಿಸೇವೆಯನ್ನು ವಹಿಸಿದ ಮುರುಘರಾಜೇಂದ್ರ ಮಹಾಂತಣ್ಣ ಬಡ್ನಿ ಹಾಗೂ ಪರಿವಾರದವರನ್ನು ಶ್ರೀಗಳು ಸಂಮಾನಿಸಿದರು.

ವೇದಿಕೆಯ ಮೇಲೆ ವಿದ್ಯಾದಾನ ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಉಪಸ್ಥಿತರಿದ್ದರು. ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.


ಕರ್ನಾಟಕ ಸರಕಾರ

**ಪುರಸಭೆ ಕಾರ್ಯಾಲಯ, ಮುಂಡರಗಿ – 582118**

Email : itstaff_ulb_mundargi@yahoo.co.in

Website: www.mundargitown.gov.in

ಸಂಖ್ಯೆ:ಪುಸಮುಂ/ನೀ.ಸ./ಟೆ.ಪ್ರ/2023-24 ದಿನಾಂಕ: 09-11-2023

**ತುರ್ತು ದರವಾರು ಕರೆ**

ಮುಂಡರಗಿ ಪಟ್ಟಣಕ್ಕೆ ಪ್ರತಿ ದಿನ ನೀರು ಪೂರೈಕೆ ಕುರಿತು ನಿರ್ವಹಣೆಗಾಗಿ ನೀರು ಪೂರೈಕ ವಿಭಾಗಕ್ಕೆ ತುರ್ತಾಗಿ ಅವಶ್ಯವಿರುವ ಸಾಮಗ್ರಿಗಳನ್ನು ಖರೀದಿಸಲು ಉದ್ದೇಶಿಸಿದು, ಪೂರೈಕೆ ಆದೇಶದ ಪ್ರಕಾರ ಪುರಸಭೆಗೆ ನೀರು ಪೂರೈಕೆಗೆ ಅವಶ್ಯಕವಾಗಿ ಬೇಕಾಗುವ ಸಾಮಗ್ರಿಗಳನ್ನು ಪೂರೈಸಲು ಇಚ್ಚೆಯುಳ್ಳ ಅಧಿಕೃತ ಪೂರೈಕೆದಾರಿಂದ ಟೆಂಡರ್ ಫಾರ್ಮದಲ್ಲಿರುವ ಷರತ್ತುಗಳಿಗೊಳಪಟ್ಟು ಟೆಂಡರ್ ದರಪಟ್ಟಿಯನ್ನು ಆಹ್ವಾನಿಸಿದೆ.

<u>ಸಾಮಗ್ರಿಗಳ ವಿವರ</u> : ನೀರು ಸರಬರಾಜು ವಿಭಾಗಕ್ಕೆ ಬೇಕಾಗುವ ಸಾಮಗ್ರಿಗಳು (ಸಾಮಗ್ರಿಗಳ ವಿವರವವನ್ನು ಟೆಂಡರ್ ಫಾರ್ಮನಲ್ಲಿ ನೀಡಲಾಗುವುದು.) ಇ.ಎಂ.ಡಿ. ಮೊತ್ತ **5,000/-**

(1) ಟೆಂಡರ್ ಫಾರ್ಮಿಗಾಗಿ ಅರ್ಜಿ ಸಲ್ಲಿಸುವ ದಿನಾಂಕ : **17-11-2023** ಸಂಜೆ: 5.30 ಗಂಟೆ ವರೆಗೆ (2) ಖಾಲಿ ಟೆಂಡರ್ ಫಾರ್ಮ ನೀಡುವ ದಿನಾಂಕ : **18-11-2023** ಸಂಜೆ: 5.30 ಗಂಟೆ ವರೆಗೆ (3) ಭರ್ತಿ ಮಾಡಿದ ಟೆಂಡರ್ ಪೆಟ್ಟಿಗೆಗೆ ಹಾಕುವ ದಿನಾಂಕ : **20-11-2023** ಸಂಜೆ 4.30 ಗಂಟೆಗೆ (4) ಟೆಂಡರ್ ಫಾರ್ಮ ಫೀ ರೂ. **500/-** ಗಳು

ಸಹಿ/- ಮುಖ್ಯಾಧಿಕಾರಿ,
ಪುರಸಭೆ, ಮುಂಡರಗಿ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/296/2023-24

# ಪಕ್ಷದ ನಿಷ್ಠಾವಂತರನ್ನು ಕಡೆಗಣಿಸಬೇಡಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಜೆಡಿಎಸ್ ಹಂಗಾಮಿ ಅಧ್ಯಕ್ಷರ ನೇಮಕಕ್ಕೆ ಗದಗ, ಮುಂಡರಗಿ, ಶಿರಹಟ್ಟಿ, ಲಕ್ಷ್ಮೇಶ್ವರ, ತಾಲೂಕುಗಳ ಅಧ್ಯಕ್ಷರ ಹಾಗೂ ಜಿಲ್ಲಾ ಪದಾಧಿಕಾರಿಗಳ ಮುಖಂಡರ ಸಭೆಯಲ್ಲಿ ತೀವ್ರ ವಿರೋಧ ವ್ಯಕ್ತಪಡಿಸಿ, ಮರುಪರಿಶೀಲನೆಗೆ ಒತ್ತಾಯಿಸಿ ರಾಜ್ಯ ಕಮಿಟಿಗೆ ಸಹಿ ಸಂಗ್ರಹದ ಮೂಲಕ ಮನವಿ ಸಲ್ಲಿಸಲಾಯಿತು.

ಗದಗ ಜಿಲ್ಲೆಗೆ ಬರಗಾಲ ಅಧ್ಯಯನ ತಂಡ ಆಗಮಿಸುವ ಪೂರ್ವದಲ್ಲಿ ಕಾರ್ಯಕ್ರಮ ರೂಪಿಸಲು ಆಗಮಿಸಿದ ರಾಜ್ಯ ಜೆಡಿಎಸ್ ಕೋರ್ ಕಮಿಟಿ ಸದಸ್ಯರು ಹಾಗೂ ಮಾಜಿ ಸಚಿವ ಆಲ್ಕೋಡ್ ಹನುಮಂತಪ್ಪ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಗದಗ ತಾಲೂಕಾಧ್ಯಕ್ಷ ಬಸವರಾಜ ಅಪ್ಪಣ್ಣವರ, ಗದಗ ಜಿಲ್ಲಾ ವಕ್ತಾರ ರಮೇಶ ಕಲಬುರ್ಗಿ, ಪಕ್ಷದಲ್ಲಿ ಹೆಸರು ಮಾಡಿ ಪಕ್ಷಾಂತರಗೊಂಡು ಹೊರಹೋದ ನಾಯಕರಿಂದ ಗದಗ ಜಿಲ್ಲೆಯಲ್ಲಿ ಪಕ್ಷ ಸಂಘಟನೆಗೆ ಹಿನ್ನಡೆಯಾಗಿದೆ. ಆದರೂ, ಗದಗ ಜಿಲ್ಲೆಯಲ್ಲಿ ಪಕ್ಷದ ಏಳ್ಗೆಗೆ ಶ್ರಮಿಸುತ್ತಿರುವ ನಾಯಕರನ್ನು ಗಣನೆಗೆ ತೆಗೆದುಕೊಳ್ಳದೆ ತೀರ್ಮಾನ ಕೈಗೊಂಡಿರುವುದು ಬೇಸರದ ಸಂಗತಿ ಎಂದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಮಾಜಿ ಕಾರ್ಯಾಧ್ಯಕ್ಷ ಎಮ್.ಆರ್. ಸೋಂಪುರ್, ಡಾ. ಎಸ್.ಆರ್. ಹಿರೇಮಠ, ಗದಗ ವಿಧಾನಸಭಾ ಮತಕ್ಷೇತ್ರದ ಅಭ್ಯರ್ಥಿ ವಿ.ಆರ್. ಗೋವಿಂದಗೌಡ್ರ, ಅಂದಾನಯ್ಯ ಮುನವಳ್ಳಿಮಠ, ಸುಭಾಷ್ ಚಂದ್ರ ದಾನರೆಡ್ಡಿ, ಲಕ್ಷಣ ನಾಯಕ್, ಜಿ.ಕೆ. ಕೊಳ್ಳಿಮಠ, ಅಶೋಕ ತ್ಯಾಮನವರ, ಹನುಮಂತಪ್ಪ ಕಂಚಿಗಾರ್, ಉಮೇಶ್ ಹಿರೇಮಠ, ಪ್ರಫುಲ್ ಕುಮಾರ್ ಪುಣೇಕರ, ತಿಪ್ಪಣ್ಣ ಹುಡೇದ, ಶೊಹೆಬ ನಾಗನೂರ್, ಈರಪ್ಪ ಜಿರಲಿ, ಎಚ್.ಎನ್. ಹಳಕಟ್ಟಿ, ಶರಣಪ್ಪ ಹೂಗಾರ್, ಜಂದೀಸಾಬ ಕಾಗದಾರ್, ಡಾ. ಎಸ್.ಕೆ. ಪೊಲೀಸ್‌ಪಾಟೀಲ್, ಡಾ. ವೈ.ಡಿ. ಹೂಗಾರ್, ಯಲ್ಲಪ್ಪ ಜಿಡ್ಡಿ, ಅಬ್ಬಾಸ ಅಲಿ ಇಟಗಿ ಮುಂತಾದವರು ಉಪಸ್ಥಿತರಿದ್ದರು.

## ಪದವಿ ಹಂತದ ಶಿಕ್ಷಣವು ವಿದ್ಯಾರ್ಥಿಗಳಿಗೆ ವಿಷಯಗಳನ್ನು ಅರ್ಥ ಮಾಡಿಕೊಳ್ಳುವ ಪರ್ವ ಕಾಲ–ಪ್ರೊ. ಬಿ. ಕೆ ರವಿ

# ನಿರಂತರ ಪ್ರಯತ್ನಗಳು ಸಾಧನೆಗೆ ಪೂರಕ




■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ವಿದ್ಯಾರ್ಥಿಗಳಿಗೆ ಕೀಳರಿಮೆ ಬೇಕಿಲ್ಲ. ನಿರಂತರ ಪ್ರಯತ್ನಗಳು ಸಾಧನೆಗೆ ಪೂರಕವಾಗಿ ಸಹಾಯ ಮಾಡುತ್ತವೆಯೆಂದು ಕೊಪ್ಪಳ ವಿಶ್ವ ವಿದ್ಯಾಲಯದ ಕುಲಪತಿಗಳಾದ ಪ್ರೊ. ಬಿ. ಕೆ ರವಿ ಅಭಿಪ್ರಾಯ ವ್ಯಕ್ತ ಪಡಿಸಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಂತರಿಕ ಗುಣಮಟ್ಟ ಭರವಸಾ ಕೋಶದ ಸಹಯೋಗದಡಿ ಶುಕ್ರವಾರ ನಡೆದ 2023–24ನೇ ಸಾಲಿನ ಪ್ರಥಮ ಸೆಮೆಸ್ಟರ್ ಬಿ.ಎ , ಬಿ.ಕಾಂ , ಬಿ.ಎಸ್ಸಿ , ಬಿ.ಬಿ.ಎ ಹಾಗೂ ಬಿ.ಸಿ.ಎ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಹಾಗೂ ಇತರೇ ಚಟುವಟಿಕೆಗಳನ್ನು ಪರಿಚಯಿಸುವ ಅಭಿವಿನ್ಯಾಸ ಕಾರ್ಯಕ್ರಮವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಪದವಿ ಹಂತದ ಶಿಕ್ಷಣವೂ ವಿಷಯಗಳನ್ನು ಅರ್ಥ ಮಾಡಿಕೊಳ್ಳುವ ಪರ್ವ ಕಾಲ. ಈ ಪದವಿ ಹಂತವು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಾಸಕ್ಕೆ ಪೂರಕವಾಗಿ ಸಹಾಯ ಮಾಡುತ್ತದೆ. ಜೊತೆಗೆ ಇದು ಸ್ಪರ್ಧಾ ಕಾಲ. ಕಷ್ಟ ಪಟ್ಟು ಓದಿದರೆ ಮಾತ್ರ ಯಶಸ್ಸು ದೊ–ರೆಯುತ್ತದೆ. ಆ ನಿಟ್ಟಿನಲ್ಲಿ ಪ್ರಯತ್ನ ಸಾಗಲಿ ಎಂದು ಹಾರೈಸಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಪ್ರೊ. ತಿಮ್ಮಾರೆಡ್ಡಿ ಮೇಟಿ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಯೇ ನಮ್ಮ ಗುರಿ ಎಂದರು.

ಮುಖ್ಯ ಅತಿಥಿಗಳಾಗಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹುಚ್ಚಮ್ಮಚೌದ್ರಿ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಮಂಜುನಾಥ ಗೊಂಡಬಾಳ, ತೋಟಪ್ಪ ಕಾಮನೂರ ಆಗಮಿಸಿದ್ದರು. ವೇದಿಕೆಯಲ್ಲಿ ಐ. ಕ್ಯೂ. ಎ. ಸಿ ಸಂಚಾಲಕರು ಮತ್ತು ವಾಣಿಜ್ಯ ಪ್ರಾಧ್ಯಾಪಕರಾದ ಡಾ. ವಾರುಣಿ, ಕನ್ನಡ ವಿಭಾಗ ಮುಖ್ಯಸ್ಥರಾದ ಗಾಯತ್ರಿ ಭಾವಿಕಟ್ಟಿ, ನಿರ್ವಹಣಾ ಶಾಸ್ತ್ರ ವಿಭಾಗದ ಶಿವನಾಥ್, ಭೌತ ಶಾಸ್ತ್ರ ವಿಭಾಗ ಸಿದ್ದಲಿಂಗೇಶ, ಇಂಗ್ಲಿಷ್ ವಿಭಾಗದ ಶಿವಣ್ಣ ಇದ್ದರು. ಕನ್ನಡ ವಿಭಾಗದ ಮುಖ್ಯಸ್ಥರಾದ ಗಾಯತ್ರಿ ಭಾವಿಕಟ್ಟಿ ಸ್ವಾಗತಿಸಿದರು. ವಿದ್ಯಾರ್ಥಿನಿ ಅಶ್ವಿನ ಪ್ರಾರ್ಥಿಸಿದರು. ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ಟಿ.ವಿ.ವಾರುಣಿ ಪ್ರಾಸ್ತಾವಿಕ ಮಾತನಾಡಿದರು. ಪತ್ರಿಕೋದ್ಯಮ ವಿಭಾಗದ ಮುಖ್ಯಸ್ಥ ಬಸವರಾಜ ಕರುಗಲ್ ಅತಿಥಿ ಪರಿಚಯ ಮಾಡಿಕೊಟ್ಟರು. ಕನ್ನಡ ವಿಭಾಗದ ಉಪನ್ಯಾಸಕ ಮಹಾಂತೇಶ್ ನೆಲಾಗಣಿ ನಿರೂಪಿಸಿದರೆ, ಡಾ.ಪ್ರಕಾಶ್ ಬಳ್ಳಾರಿ ವಂದಿಸಿದರು.

ಸಮಾರಂಭದಲ್ಲಿ ಎಲ್ಲ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಇದ್ದರು.

### ಹುಚ್ಚಮ್ಮ ಅವರಿಗೆ ಸನ್ಮಾನ

ಸರಕಾರಿ ಶಾಲೆಗೆ ತಮ್ಮ ಜಮೀನು ನೀಡುವ ಮೂಲಕ ರಾಜ್ಯದ ಮನೆ ಮಾತಾಗಿರುವ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಹುಚ್ಚಮ್ಮ ಚೌದ್ರಿ ಅವರನ್ನು ಕಾಲೇಜಿನ ವತಿಯಿಂದ ಸನ್ಮಾನಿಸಿ, ಗೌರವಿಸಲಾಯಿತು.

# ರಾಜ್ಯಾಧ್ಯಕ್ಷರಾಗಿ ಬಿ.ವೈ. ವಿಜಯೇಂದ್ರ: ಬಿಜೆಪಿಯಲ್ಲಿ ಹೊಸ ಮನ್ವಂತರ

■ ವಿಜಯಸಾಕ್ಷಿ ಸುದ್ದಿ, ಗದಗ



ಬಿಜೆಪಿ ನೂತನ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾಗಿರುವ ಬಿ.ವೈ. ವಿಜಯೇಂದ್ರ ಅವರಿಂದ ರಾಜ್ಯ ಬಿಜೆಪಿಯಲ್ಲಿ ಹೊಸ ಮನ್ವಂತರ ತೆರೆದುಕೊಳ್ಳಲಿದೆ ಎಂದು ಬಿಜೆಪಿ ಮುಖಂಡ ರಾಜು ಕುರುಡಗಿ ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕರ್ನಾಟಕದಲ್ಲಿ ಬಿಜೆಪಿ ಕಟ್ಟಿ ಬೆಳೆಸಿದ ಬಿ.ಎಸ್. ಯಡಿಯೂರಪ್ಪ ಅವರ ಪುತ್ರ ಬಿ.ವೈ. ವಿಜಯೇಂದ್ರ ಅವರು ತಂದೆಯ ಸಂಘಟನಾ ಚಾತುರ್ಯವನ್ನು ಮೈಗೂಡಿಸಿಕೊಂಡಿದ್ದು, ಈಗಾಗಲೇ ಜರುಗಿದ ಸಾರ್ವತ್ರಿಕ ಚುನಾವಣೆಗಳಲ್ಲಿ ತಮ್ಮ ಸಾಮರ್ಥ್ಯವನ್ನು ರುಜುವಾತು ಮಾಡಿದ್ದಾರೆ. ರಾಜ್ಯದ ಮುಂದಿನ ಪೀಳಿಗೆಗೆ ಬಿ.ವೈ. ವಿಜಯೇಂದ್ರ ಆಯ್ಕೆ ಅತ್ಯಂತ ಸೂಕ್ತವಾಗಿದ್ದು, ಬಿಜೆಪಿ ಪಕ್ಷ ಮತ್ತೆ ಬೇರು ಮಟ್ಟದಿಂದ ಸಂಘಟಿತವಾಗುವುದರಲ್ಲಿ ಸಂಶಯವಿಲ್ಲ ಎಂದಿದ್ದಾರೆ.

# ಈ ಬಾರಿ ಬಿಜೆಪಿ ಟಿಕೆಟ್ ಸಿಗುವ ಖಾತ್ರಿಯಿದೆ




■ ವಿಜಯಸಾಕ್ಷಿ ಸುದ್ದಿ, ಗದಗ

ಇಡೀ ಜಗತ್ತೇ ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವವನ್ನು ಮೆಚ್ಚಿಕೊಂಡಿದ್ದು, ಮುಂಬರುವ ಚುನಾವಣೆಯಲ್ಲೂ ಜನ ಮೋದಿಯವರೇ ಪ್ರಧಾನಿಯಾಗಬೇಕು ಎಂದು ಬಯಸುತ್ತಿದ್ದಾರೆ. ಮೋದಿಯವರ ಕೈ ಬಲಪಡಿಸುವ ಉದ್ದೇಶದಿಂದ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ ಸ್ಪರ್ಧಿಸುವ ಉದ್ದೇಶವಿದೆ ಎಂದು ಡಾ. ಶೇಖರ ಸಜ್ಜನರ ತಿಳಿಸಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕಳೆದ 38 ವರ್ಷಗಳಿಂದ ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿದ್ದೇನೆ. 2004ರಲ್ಲಿ ಮುಂಡರಗಿ ಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿ, 2005ರಲ್ಲಿ ಮಾಹಿತಿ ಹಕ್ಕು ಆಯೋಗದ ಆಯುಕ್ತನಾಗಿ ಸೇವೆ ಸಲ್ಲಿಸಿದ್ದೇನಲ್ಲದೆ, ಪಕ್ಷ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದೇನೆ. ಈ ಬಾರಿ ಬಿಜೆಪಿ ಟಿಕೆಟ್ ಸಿಗುವ ಖಾತ್ರಿಯಿದೆ ಎಂದು ತಿಳಿಸಿದರು.

2006ರಿಂದ 2009ರವರೆಗೆ ಬಿಜೆಪಿ ಜಿಲ್ಲಾ ಉಪಾಧ್ಯಕ್ಷನಾಗಿ ಸೇವೆ ಸಲ್ಲಿಸಿದ್ದು, ಕಳೆದ ವಿಧಾನಸಭಾ ಚುನಾವಣೆಯಲ್ಲಿ ಜಿಲ್ಲೆಯ ಬಿಜೆಪಿ ಅಭ್ಯರ್ಥಿಗಳ ಪರವಾಗಿ ಪ್ರಚಾರ ಕೈಗೊಂಡಿದ್ದೇನೆ ಎಂದರಲ್ಲದೆ, ತಾವೀಗ ಪೂರ್ಣಾವಧಿಯ ಜನಸೇವೆಗೆ ಸಿದ್ಧನಾಗಿದ್ದೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿ.ಎ. ಹಳ್ಳಿಕೇರಿ, ವಿ.ಎಸ್. ಹೊಸಮಠ, ಡಾ. ಎಂ.ವಿ. ಐಹೊಳ್ಳಿ, ಮಂಜು ಬಟ್ಟೂರ, ಡಾ. ಪ್ರವೀಣ ಸಜ್ಜನರ, ಅರವಿಂದ ಶೆಟ್ಟರ್, ಪ್ರಭು ಕಲಬಂಡಿ ಮುಂತಾದವರು ಹಾಜರಿದ್ದರು.

# ಸ್ವಚ್ಛ ದೀಪಾವಳಿ–ಶುಭ ದೀಪಾವಳಿ ಅಭಿಯಾನ

■ ವಿಜಯಸಾಕ್ಷಿ ಸುದ್ದಿ, ಗದಗ




ಕೇಂದ್ರ ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯವು ಸ್ವಚ್ಛ್ ಭಾರತ್ ಮಿಷನ್ ನಗರ–2.0 ಯೋಜನೆಯಡಿ ನರಗುಂದ ಪಟ್ಟಣ ಪಂಚಾಯತಿ ವ್ಯಾಪ್ತಿಯ ಸಾರ್ವಜನಿಕರು/ವ್ಯಾಪಾರಸ್ಥರಿಗೆ ತಿಳಿಸುವುದೇನೆಂದರೆ, ನಗರ ಸ್ಥಳೀಯ ಸಂಸ್ಥೆಗಳ ಮಟ್ಟದಲ್ಲಿ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಲು ಉತ್ತೇಜಿಸುವ ಮೂಲಕ ಸುಸ್ಥಿರ ಮೂಲಸೌಕರ್ಯಗಳ ಅಭಿವೃದ್ಧಿಯನ್ನು ಪ್ರೋತ್ಸಾಹಿಸಲು ಹಾಗೂ ಪರಿಸರ ಸ್ನೇಹಿ ಪ್ಯಾಕೇಜಿಂಗ್ ಬಳಕೆಯನ್ನು ಉತ್ತೇಜಿಸಲು ಸ್ವಚ್ಛ ದೀಪಾವಳಿ ಶುಭ ದೀಪಾವಳಿ ಅಭಿಯಾನವನ್ನು ಹಮ್ಮಿಕೊಂಡಿದ್ದು ಏಕಬಳಕೆ ಪ್ಲಾಸ್ಟಿಕ್‌ನ್ನು ನಿಷೇಧಿಸಿ ಪರಿಸರ ಸ್ನೇಹಿ ಪ್ಯಾಕೇಜಿಂಗ್ ಬಳಕೆಯನ್ನು ಉತ್ತೇಜಿಸಿ ಸ್ವಚ್ಛ ದೀಪಾವಳಿ ಶುಭ ದೀಪಾವಳಿ ಅಭಿಯಾನವನ್ನು ಯಶ್ವಿಸಿಗೊಳಿಸಲು ನರಗುಂದ ಪಟ್ಟಣ ಪಂಚಾಯತ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ರಾತ್ರಿ 8 ಗಂಟೆಯಿಂದ 10 ಗಂಟೆಯವರೆಗೆ ಹಸಿರು ಪಟಾಕಿಗಳನ್ನು ಮಾತ್ರ ಸ್ಫೋಟಿಸಲು ಅವಕಾಶ ನೀಡಿದೆ.

# ಹಾವಳಿ ಆಂಜನೇಯ ರಥೋತ್ಸವ ನ.14ರಿಂದ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದ ಜಾತ್ರಾಮಹೋತ್ಸವ ನ.14ರಿಂದ 3 ದಿನಗಳ ಕಾಲ ನಡೆಯಲಿದೆ. ನ.14ರಂದು ದೀಪಾವಳಿ ಪಾಡ್ಯದ ದಿನ ಸಂಜೆ 5.30ಕ್ಕೆ ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ರಥೋತ್ಸವ ನೆರವೇರಲಿದೆ.

ಅಂದು ಬೆಳಿಗ್ಗೆ ದೇವಸ್ಥಾನದಲ್ಲಿ ವಿಶೇಷ ಪೂಜೆ, ಅಲಂಕಾರ ಮತ್ತು ನೈವೇದ್ಯ ಕಾರ್ಯಕ್ರಮ ನಡೆಯಲಿದೆ. ನ.15ರಂದು ಕಡುಬಿನ ಕಾಳಗ, ನ.16ರಂದು ಓಕುಳಿ ಜರುಗಲಿದೆ. ಸಾರ್ವಜನಿಕರು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ದೇವಸ್ಥಾನ ಕಮಿಟಿ, ಹಿಂದೂ ಮಹಾಸಭಾ ಗಣಪತಿ ಸೇವಾ ಮಂಡಳಿಯ ಪ್ರಕಟಣೆ ತಿಳಿಸಿದೆ.

# ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೇ ಪತ್ತೆ ಮಾಡಿ ಚಿಕಿತ್ಸೆ ಪಡೆಯಿರಿ

■ ವಿಜಯಸಾಕ್ಷಿ ಸುದ್ದಿ, ಗದಗ



ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಗ್ರಾಮ ಪಂಚಾಯತ ಯಲಿಶಿರೂರ, ಪ್ರಾಥಮಿಕ ಆರೋಗ್ಯ ಕೇಂದ್ರ ಹರ್ತಿ, ಆರೋಗ್ಯ ಮತ್ತು ಕ್ಷೇಮ ಕೇಂದ್ರ, ಉಪಕೇಂದ್ರ ಯಲಿಶಿರುಂಜ, ಸ್ಕೈಲ್ ಫೌಂಡೇಶನ್ ಗದಗ, ಹುಬ್ಬಳ್ಳಿಯ ಜಯಪ್ರಿಯ ಕಣ್ಣಿನ ಆಸ್ಪತ್ರೆ ಸಂಯುಕ್ತ ಆಶ್ರಯದಲ್ಲಿ ಆಯುಷ್ಮಾನ್‌ಭವ ಆರೋಗ್ಯ ಶಿಬಿರ ಮೇಳವನ್ನು ಯಲಿಶಿರೂರ ಸಮುದಾಯ ಭವನದಲ್ಲಿ ಮಂಗಳವಾರದಂದು ಹಮ್ಮಿಕೊಳ್ಳಲಾಗಿತ್ತು.

ಆರೋಗ್ಯ ತಪಾಸಣಾ ಶಿಬಿರವನ್ನು ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ್ ಸಸಿಗೆ ನೀರುಣಿಸುವುದರ ಮೂಲಕ ಉದ್ಘಾಟಿಸಿ, ಆಯುಷ್ಮಾನ್ ಭವ ಆರೋಗ್ಯ ಶಿಬಿರವು ಜನರ ಮನೆಯ ಬಾಗಿಲಿನಲ್ಲಿ ಆರೋಗ್ಯದ ವಿವಿಧ ಸೇವೆಗಳಾದ ಸಾಂಕ್ರಾಮಿಕ ರೋಗಗಳ ತಪಾಸಣೆ, ಹೃದಯಸಂಬಂಧಿ ಕಾಯಿಲೆ, ಮಧುಮೇಹ ಕಾಯಿಲೆ, ರಕ್ತ ಹೀನತೆ, ಕ್ಯಾನ್ಸರ್ ಕಾಯಿಲೆಗಳ ತಪಾಸಣೆ, ಆಯುಷ್ಮಾನ್ ಭವ, ಆರೋಗ್ಯ ಕರ್ನಾಟಕ ಕಾರ್ಡ್ ವಿತರಣೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದರು.

ಇಂದಿನ ದಿನಮಾನಗಳಲ್ಲಿ ಅಸಾಂಕ್ರಾಮಿಕ ರೋಗಗಳಾದ ರಕ್ತದೊತ್ತಡ ಮಧುಮೇಹ, ಕ್ಯಾನ್ಸರ್ ರೋಗಗಳು ಅಧಿಕವಾಗಿ ಕಂಡುಬರುತ್ತವೆ.

ಈ ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೇ ಪತ್ತೆ ಹಚ್ಚಿ ಚಿಕಿತ್ಸೆ ನೀಡಿದರೆ ರೋಗದಿಂದಾಗುವ ಸಮಸ್ಯೆಗಳನ್ನು ತಡೆಯಬಹುದು ಮತ್ತು 30 ವರ್ಷ ಮೇಲ್ಪಟ್ಟ ಎಲ್ಲ ಗ್ರಾಮಸ್ಥರು ತಮ್ಮ ಆರೋಗ್ಯ ತಪಾಸಣೆಗಳನ್ನು ವರ್ಷಕ್ಕೆ ಒಮ್ಮೆಯಾದರು ಮಾಡಿಸಿಕೊಳ್ಳಬೇಕು ಮತ್ತು ಇಂದಿನ ಆಹಾರ ಪದ್ದತಿ ಜೀವನ ಶೈಲಿ ಸುಧಾರಿಸಿಕೊಳ್ಳಬೇಕು. ತಂಬಾಕು ಸೇವನೆ ಇತರೆ ಮಾದಕ ವಸ್ತುಗಳಿಂದ ದೂರ ಇರುವುದರ ಕುರಿತು ಜನರಿಗೆ ಆರೋಗ್ಯ ಶಿಕ್ಷಣವನ್ನು ನೀಡಿ ಮಕ್ಕಳ ಆರೋಗ್ಯ ತಪಾಸಣೆಯನ್ನು ಶಿಬಿರದಲ್ಲಿ ನಡೆಸಿಕೊಟ್ಟರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀಮತಿ ಜೋತ್ಸನಾ ಮಾತನಾಡಿ, ಆರೋಗ್ಯದ ಕುರಿತು ಎಚ್ಚರಿಕೆ ಮತ್ತು ಎಲ್ಲಾ ಪೂರಕ ಉತ್ತಮ ಆಹಾರ ಸೇವನೆ ಮಾಡಬೇಕು ಎಂದರು.

ಶಿಬಿರದಲಿ 80 ಜನರ ರಕ್ತದೊತ್ತಡ ಹಾಗೂ ಮಧುಮೇಹ ತಪಾಸಣೆ, 40 ಜನರ ಕಣ್ಣಿನ ತಪಾಸಣೆ ಮಾಡಿ, ಅವರಲ್ಲಿ 15 ಜನರಿಗೆ ಕಾಟ್ರ್ಯಾಕ್ಟ್ ಶಸ್ತ್ರಚಿಕಿತ್ಸೆಗಾಗಿ ಆಯ್ಕೆ ಮಾಡಲಾಯಿತು.

45 ಮಕ್ಕಳ ತಪಾಸಣೆ, 8 ಗರ್ಭಿಣಿಯರ ತಪಾಸಣೆ ಮಾಡಿ ಸ್ಕ್ಯಾನಿಂಗ್ ಮಾಡಲಾಯಿತು. 4 ಈ.ಸಿ.ಜಿ ಹಾಗೂ 23 ಜನಟೆಲಿ ಕನ್ಸ್ ಲ್ಟೇಷನ್ ಮಾಡಲಾಯಿತು ,

ಸಮುದಾಯ ಆರೋಗ್ಯ ಅಧಿಕಾರಿ ಕು. ನತಾಶಾ ಪಿಸಿ ಸ್ವಾಗತಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿಯ ಸದಸ್ಯರಾದ ಪರಶುರಾಮ ಹೂಗಾರ, ಮಂಜುನಾಥ ಭಜಂತ್ರಿ, ಶ್ರೀಮತಿ ಕವಿತಾ ಆರೋಗ್ಯ ಮತ್ತು ಕ್ಷೇಮ ಕೇಂದ್ರದ ಸಿಬ್ಬಂದಿಗಳಾದ ಶ್ರೀಮತಿ ರೇಣುಕಾ, ಶ್ರೀಮತಿ ಶಾಂತ, ಶ್ರೀಮತಿ ಅಕ್ಕಮ್ಮ ಹಾಗೂ ಶ್ರೀಮತಿ ಸುಧಾ, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಪಂಚಾಯಿತಿಯ ಸಿಬ್ಬಂದಿಗಳು ಗ್ರಾಮಸ್ಥರು ಭಾಗವಹಿಸಿದ್ದರು.

# ಬಿಕಾಂ 1ನೇ ಸೆಮಿಸ್ಟರ್‌ನಲ್ಲಿ ಮನೋರಮಾ ಕಾಲೇಜು ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ





ನಗರದ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿಕಾಂ 1ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ಸಾಧನೆಗೈದ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ತೌಸಿಫ ಮುಲ್ಲಾ 596 ಅಂಕ ಪಡೆದು ಪ್ರಥಮ ಸ್ಥಾನ, ಶ್ವೇತಾ ನರಸಾಪೂರ 587 ಅಂಕ ಪಡೆದು ದ್ವಿತೀಯ ಸ್ಥಾನ, ತೇಜಸ್ವಿನಿ ಮೆಣಸಿನಕಾಯಿ 584 ಅಂಕ ಪಡೆದು ತೃತೀಯ ಸ್ಥಾನ, ಹರಿಹರನ 571 ಅಂಕ ಪಡೆದು ನಾಲ್ಕನೇಯ ಸ್ಥಾನ, ಪ್ರೇಮಾ ಹಿರೆಸಕ್ಕರಗೌಡ್ರ 569 ಅಂಕ ಪಡೆದು ಐದನೇಯ ಸ್ಥಾನ ಪಡೆದಿದ್ದಾರೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಸಹ ಸಂಯೋಜಕರಾದ ಪ್ರೊ. ನಿವೇದಿತಾ ಪೊಲೀಸ್‌ಪಾಟೀಲ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

# ಆನ್‌ಲೈನ್ ಅರ್ಜಿ ಸಲ್ಲಿಸಲು ನ. 29ರವರೆಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

2023–24ನೇ ಸಾಲಿನ ಎರಡು ವರ್ಷದ ಬಿ.ಇಡಿ ದಾಖಲಾತಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಗೆ ನವೆಂಬರ್ 29 ರವರೆಗೆ ಅವಕಾಶವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ www.schooleducation.kar.nic.in ಜಾಲತಾಣವನ್ನು ಹಾಗೂ ಡಯಟ್ ನೋಡಲ್ ಅಧಿಕಾರಿ ಎಸ್.ಸಿ.ಹಡಗಲಿ ದೂ.ಸಂ. 988679860 ಸಂಪರ್ಕಿಸಬಹುದಾಗಿದೆ.

# ನಿಧನ ವಾರ್ತೆ

## ಮಲ್ಲಣ್ಣ ಯಳವತ್ತಿ



**ಹುಬ್ಬಳ್ಳಿ:** ಗದಗ ತಾಲೂಕಿನ ಹುಲಕೋಟಿಯ ಸಮಾಜಸೇವಕ, ಪ್ರಗತಿಪರ ರೈತ ಮಲ್ಲಪ್ಪ (ಮಲ್ಲಣ್ಣ) ಸಂಗಪ್ಪ ಯಳವತ್ತಿ ಇವರು ಶುಕ್ರವಾರ ಬೆಳಿಗ್ಗೆ ಹುಬ್ಬಳ್ಳಿಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ನಿವೃತ್ತ ಪೊಲೀಸ್ ಅಧಿಕಾರಿ ಬಿ.ಬಿ. ಸಕ್ರಿ, ಎನ್.ಬಿ. ಸಕ್ರಿ ಹಾಗೂ ಕಲಘಟಗಿಯ ತೋಟಗಾರಿಕೆ ಇಲಾಖೆಯ ಅಧಿಕಾರಿ ಹನುಮಂತ ಆಸಂಗಿ ಮೃತರ ಅಳಿಯಂದಿರಾಗಿದ್ದಾರೆ. ಮೃತರ ಅಂತ್ಯಕ್ರಿಯೆಯು ಶನಿವಾರ ಮಧ್ಯಾಹ್ನ 2 ಗಂಟೆಗೆ ಹುಲಕೋಟಿಯ ಮುಕ್ತಿವನದಲ್ಲಿ ಜರುಗಲಿದೆ.

**ಸಂತಾಪ:** ಮಲ್ಲಣ್ಣ ಯಳವತ್ತಿಯವರ ನಿಧನಕ್ಕೆ ಸಚಿವ ಎಚ್.ಕೆ. ಪಾಟೀಲ, ಮಾಜಿ ಶಾಸಕ ಆರ್.ಡಿ. ಪಾಟೀಲ ಶೋಕ ವ್ಯಕ್ತಪಡಿಸಿದ್ದಾರೆ.

## ಎಸ್.ಕೆ. ನದಾಫ್ ಸಂಪಾದಿತ ಕಾನೂನು ಪುಸ್ತಕ ಬಿಡುಗಡೆಗೊಳಿಸಿದ ಸಚಿವ ಎಚ್.ಕೆ. ಪಾಟೀಲ

# ಸತತ ಅಧ್ಯಯನದಿಂದ ಮಾತ್ರ ಗೆಲುವು ಸಾಧ್ಯ

■ ವಿಜಯಸಾಕ್ಷಿ ಸುದ್ದಿ, ಗದಗ



ಪ್ರಾಚೀನ ಕಾಲದಿಂದಲೂ ನ್ಯಾಯ, ನೀತಿ ಹಾಗೂ ಧರ್ಮಗಳು ಭಾರತೀಯ ಜನ–ಜೀವನದ ಸಾಮಾಜಿಕ, ಆರ್ಥಿಕ, ಧಾರ್ಮಿಕ ರಂಗಗಳ ಅವಿಭಾಜ್ಯಗಳಾಗಿವೆ. ನ್ಯಾಯಾಲಯದಲ್ಲಿ ನ್ಯಾಯದಾನ ಪ್ರಕ್ರಿಯೆಯಿಂದ ಮಾತ್ರ ಸಾಮಾಜಿಕ ನ್ಯಾಯ ಸಿಗಲು ಸಾಧ್ಯ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಅವರು ಇತ್ತೀಚೆಗೆ ಬೆಂಗಳೂರಿನ ಕರ್ನಾಟಕ ಲಾ ರಿಪೋರ್ಟರ್ಸ್ ಪಬ್ಲಿಕೇಷನ್‌ನಿಂದ ಯುವ ನ್ಯಾಯವಾದಿ ಎಸ್.ಕೆ. ನದಾಫ್ ಅವರ ಸಂಪಾದಿತ 'ಸಿವಿಲ್ ನ್ಯಾಯಾಧೀಶರ ಮುಖ್ಯ ಪರೀಕ್ಷೆಯ ಪರಿಹರಿಸಿದ ಪ್ರಶ್ನೆ ಪತ್ರಿಕೆಗಳು' ಕೃತಿ ಬಿಡುಗಡೆಗೊಳಿಸಿ ಮಾತನಾಡಿದರು.

ಯುವ ಉತ್ಸಾಹಿ ನ್ಯಾಯವಾದಿ ನದಾಫ್ ಅವರು ತಮ್ಮ ಕೃತಿಯಲ್ಲಿ 2013ರಿಂದ 2022ರ ಹೊಸ ಪಠ್ಯಕ್ರಮ ಕಾನೂನು ಪತ್ರಿಕೆ ಭಾಗ–1ರಿಂದ ಭಾಗ–3 ಮತ್ತು ಅನುವಾದ ಪತ್ರಿಕೆ 1800 ಪುಟಗಳ ಬೃಹತ್ ಸಂಪಾದಿತ ಕೃತಿ ಲೋಕಾರ್ಪಣೆ ಮಾಡುವ ಅವಕಾಶ ಸಿಕ್ಕಿದ್ದು ಸಂತಸ ತಂದಿದೆ. ಇಂದಿನ ಸಂಘರ್ಷದ ಕಂದಕಗಳನ್ನು ಮುಚ್ಚಿ ಯಶಸ್ಸಿನ ಹಾದಿಯಲ್ಲಿ ಸಾಗಲು ಯುವ ನ್ಯಾಯವಾದಿಗಳಿಗೆ ಸಿವಿಲ್ ನ್ಯಾಯಾಧೀಶರ ಮುಖ್ಯ ಪರೀಕ್ಷೆಗಾಗಿ ಪೂರ್ವ ತಯಾರಿಕೆಗಾಗಿ ಈ ಪುಸ್ತಕ ಉತ್ತಮ ಮಾರ್ಗದರ್ಶಿಯಾಗಿದೆ ಎಂದು ಹೇಳಿದರು.

ಲೇಖಕ, ನ್ಯಾಯವಾದಿ ಎಸ್.ಕೆ. ನದಾಫ್ ಮಾತನಾಡಿ, ಇಂದಿನ ದಿನಮಾನದಲ್ಲಿ ನಮ್ಮ ಯುವ ನ್ಯಾಯವಾದಿಗಳಿಗೆ ಕನ್ನಡದಲ್ಲಿ ಕಾನೂನು ಪುಸ್ತಕಗಳ ಅವಶ್ಯಕತೆ ಹೆಚ್ಚಿದೆ. ಈ ನಿಟ್ಟಿನಲ್ಲಿ ನಾನು ನನ್ನ ಅನುಭವ ಹಾಗೂ ಅಧ್ಯಯನಶೀಲತೆಯಿಂದ ಈ ಪುಸ್ತಕ ಸಿದ್ಧಪಡಿಸಿದ್ದೇನೆ. ಮುಖ್ಯವಾಗಿ ನನ್ನ ಮಾರ್ಗದರ್ಶಕರು ಹಾಗೂ ನಮ್ಮ ಮಾತೃ ಇಲಾಖೆಯ ಸಚಿವರಿಂದಲೇ ಈ ಪುಸ್ತಕ ಬಿಡುಗಡೆಯಾಗಿದ್ದು ನನ್ನ ಪಾಲಿಗೆ ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಬೆಂಗಳೂರಿನ ಕರ್ನಾಟಕ ಲಾ ರಿಪೋರ್ಟ್, ಬಿಬಿಸಿ ಪ್ರಕಾಶನದ ಪ್ರಕಾಶಕ ವಿ.ತ್ಯಾಗರಾಜ್ ಹಾಗೂ ನ್ಯಾಯವಾದಿ ಕುಶವಂತ ಕುಮಾರ್, ಲೇಖಕ ಎಸ್.ಕೆ. ನದಾಫ್ ಹಾಗೂ ನ್ಯಾಯವಾದಿಗಳಾದ ತುಳಸಿಗಿರಿ, ಬೆಳ್ಳೆಪ್ಪ, ಸಚಿವರ ವಿಶೇಷ ಕರ್ತವ್ಯ ಅಧಿಕಾರಿ ಡಾ. ಲತೀಫ ಕುನ್ನಿಭಾವಿ ಮುಂತಾದವರು ಉಪಸ್ಥಿತರಿದ್ದರು.

ನ್ಯಾಯಾಧೀಶರಾಗಲು ಕನಸು ಕಾಣುತ್ತಿರುವ ನ್ಯಾಯವಾದಿ ಮಿತ್ರರು ತಪಸ್ಸಿನ ರೀತಿಯಲ್ಲಿ ಅಧ್ಯಯನಶೀಲರಾದಾಗ ಮಾತ್ರ ಗೆಲುವು ಲಭಿಸುತ್ತದೆ. ಪರೀಕ್ಷಾರ್ಥಿಗಳ ನಿಶ್ಚಿತ ಗುರಿ ಸಾಧನೆಗೆ ಈ ಪುಸ್ತಕ ಪ್ರಶ್ನೋತ್ತರ ಮಾಲಿಕೆಯ ಹೊತ್ತಿಗೆಯಾಗಿ ಗುರುವಿನ ಸ್ಥಾನದಲ್ಲಿ ಮಾರ್ಗದರ್ಶಿಯಾಗಬಲ್ಲದು. ಕಳೆದ ಒಂದು ದಶಕದಲ್ಲಿ ನ್ಯಾಯಾಧೀಶರ ಮತ್ತು ಅಭಿಯೋಜಕರ ಪರೀಕ್ಷೆಯಲ್ಲಿ ಭಾಗಶಃ ಅಭ್ಯರ್ಥಿಗಳು ಬಿ.ಬಿ.ಸಿ ಹಾಗೂ ಕೆ.ಎಲ್.ಆರ್ ಸೇರಿದಂತೆ ಇನ್ನಿತರ ಪ್ರಕಾಶನದ ಕಾನೂನು ಪುಸ್ತಕಗಳನ್ನು ಉಲ್ಲೇಖ ಮಾಡಿದ್ದನ್ನು ಸಚಿವರು ಸ್ಮರಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka